ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 152

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 24–05–2026

## ಶಾಲೆ ಇದೆ, ಸೌಲಭ್ಯ ಇಲ್ಲ; ಕಾಲೇಜಿಲ್ಲದೆ ವಿದ್ಯಾರ್ಥಿಗಳ ಕನಸು ಕುಸಿತ

# ಒಂದೇ ಸೂರಿನಡಿ ಶಿಕ್ಷಣ ಕನಸು ಭಗ್ನ: ಕೆಪಿಎಸ್ ಪಟ್ಟಿಯಿಂದ ವಂಚಿತ ಉಟಕನೂರು

ಧೈರ್ಯದ ದಾರಿ

ಪೋತ್ನಾಳ –: ಮಾನ್ವಿ ತಾಲೂಕಿನ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನ ಹೊಂದಿದ ಉಟಕನೂರು ಗ್ರಾಮ ಅದರ ವ್ಯಾಪ್ತಿಯಲ್ಲಿ ಮೊದಲ ಪ್ರೌಢ ಶಾಲೆ ಹೊಂದಿದ ಗ್ರಾಮವಾಗಿದೆ. 2001–02 ಸಾಲಿನಲ್ಲಿ ಈ ಗ್ರಾಮದಲ್ಲಿ ಪ್ರೌಢ ಶಾಲೆ ಆರಂಭವಾಗಿ ಇಂದಿಗೆ 25 ವರ್ಷವಾದರೂ ಕಾಲೇಜು ಶಿಕ್ಷಣ ವ್ಯವಸ್ಥೆ ಹೊಂದಬೇಕಾಗಿದ್ದ ಈ ಗ್ರಾಮ ಪಂಚಾಯತಿ ಕಚೇರಿ ಹೊಂದಿದ್ದರೂ ಒಂದೇ ಸೂರಿನಲ್ಲಿ ನರ್ಸರಿಯಿಂದ ಕಾಲೇಜು ವರೆಗೆ ಉತ್ತಮ ಸೌಲಭ್ಯ ಜೊತೆಗೆ ಉತ್ತಮ ಶಿಕ್ಷಣ ಕೊಡಲು ಜಾರಿಗೆ ಬಂದ ಕರ್ನಾಟಕ ಪಬ್ಲಿಕ್ ಶಾಲೆ ವ್ಯವಸ್ಥೆಯಡಿ ಶಾಲೆಯಾಗಿ ಆಯ್ಕೆ ಆಗದಿರುವುದು ಬೇಸರ ತರಿಸಿದೆ. ಈ ಗ್ರಾಮ ಸೇರಿದಂತೆ ಅದರ ವ್ಯಾಪ್ತಿಯ ಹಳ್ಳಿಗಳು ಉತ್ತಮ ಶಿಕ್ಷಣ ಆರೋಗ್ಯ ಮೂಲ ಸೌಕರ್ಯ ಹೊಂದುವಲ್ಲಿ ಇನ್ನೂ ಹಿಂದುಳಿದಿದ್ದು ಇಲ್ಲಿನ ಜನಪ್ರತಿನಿದಿನಗಳು ಮುಖಂಡರು ಬುದ್ದಿಜೀವಿಗಳು ವಿದ್ಯಾವಂತ ಪ್ರಬುದ್ಧ ಸಾರ್ವಜನಿಕರು ಊರಿನ ಕುರಿತು ಕನಿಷ್ಠ ಕಾಳಜಿ ತೋರಿಸದಿರುವುದು ನಾಚಿಕೆಗೇಡಿನ ವಿಷಯವಾಗಿದೆ.

ಇನ್ನೂ ಹಿರಿಯ ಪ್ರಾಥಮಿಕ ಶಾಲೆ ರಜತ ಮಹೋತ್ಸವ ಆಚರಿಸಿಕೊಂಡರೂ ಅಲ್ಲಿನ ಮೂಲ ಸೌಕರ್ಯ ಮರೀಚಿಕೆಯಾಗಿ ಮಳೆ ಬಂದರೆ ಸೋರುವ ಇಂದು ಅಥವಾ ನಾಳೆ ಬೀಳುವ ಕಟ್ಟಡಗಳನ್ನು ಹೊಂದಿವೆ. ಆರಂಭದಲ್ಲಿ ಹೆಚ್ಚು ವಿದ್ಯಾರ್ಥಿಗಳನ್ನು



ಹೊಂದಿದ್ದ ಈ ಶಾಲೆಗಳು ಈಗ ಸಂಖ್ಯೆ ಕುಸಿತವಾಗುತ್ತಿರುವುದು ಕಳವಳಕಾರಿಯಾದ ಸಂಗತಿಯಾಗಿದೆ. ಶಿಕ್ಷಕರ ಕೊರತೆ ಹಾಗೂ ಪುಟ್ಟ ಪುಟ್ಟ ಮಕ್ಕಳು ಬಹು ದೂರ ಭಾರವಾದ ಬ್ಯಾಗ್ ಹೊತ್ತು ನಡೆದುಕೊಂಡು ಹೋಗಲು ಶ್ರಮ ಪಡುವುದು ಅವರ ಬೆಳವಣಿಗೆ ಹಂತಕ್ಕೆ ಮಾರಕವಾಗಿದೆ. ಗ್ಯಾರಂಟಿ ಭಾಗ್ಯ ಕೊಟ್ಟು ಉಚಿತ ಬಸ್ ಪ್ರಯಾಣಕ್ಕೆ ಅನುಕೂಲ ಕಾಣುತ್ತಿರುವ ಆಡಳಿತ ವ್ಯವಸ್ಥೆಯಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಕಾಣದ ಈ ಗ್ರಾಮ ಸೇರಿ ಪಂಚಾಯತಿಯ ಕೆಲವು ಗ್ರಾಮಗಳ ವಿದ್ಯಾರ್ಥಿಗಳು ಕಾಲೇಜು ಶಿಕ್ಷಣ ವಂಚಿತರಾಗಿ ಅರ್ಧಕ್ಕೆ ಕಲಿಕೆ ನಿಲ್ಲಿಸಿ ದುಡಿಮೆಗೆ ಕಡೆಗೆ ಮುಖ ಮಾಡಿದ್ದಾರೆ. ಇನ್ನೂ ಕೆಲವರು ಜೀವ ಕೈಯಲ್ಲಿ ಹಿಡಿದು ಖಾಸಗಿ ವಾಹನಗಳ ಮೂಲಕ ಶಿಕ್ಷಕಣಕ್ಕಾಗಿ ನಗರ ಪಟ್ಟಣಗಳ ಕಡೆ ಸಂಚಾರ ಮಾಡಲೇಬೇಕಾಗಿದೆ.

ಇಲ್ಲಿನ ಶಿಕ್ಷಣ ಅಭಿಮಾನಿಗಳು ಊರಿನ ಮುಖಂಡರು ಜನಪ್ರತಿನಿದಿನಗಳು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಸ್ಥಳೀಯ ಸಚಿವರು ಶಾಸಕರು ಸಂಸದರ ಗಮನಕ್ಕೆ ತಂದು ಸರ್ಕಾರಕ್ಕೆ ಮನವರಿಕೆ ಮಾಡಿದ್ದರೆ ಇಸ್ಟೊತ್ತಿಗೆ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಲ್ಲಿ ಕಾಲೇಜು ಶಿಕ್ಷಣ ಸಿಕ್ಕಿ ವಿದ್ಯಾರ್ಥಿಗಳಿಗೆ ಪ್ರಯಾಸ ಪಟ್ಟು ನಗರ ಪಟ್ಟಣಗಳಿಗೆ ಅಲೆದು ಸಮಯ ಆರೋಗ್ಯ ಹಾಳು ಮಾಡಿಕೊಂಡು ಶಿಕ್ಷಣ ಪಡೆಯುವ ಪ್ರಮೇಯ ಬರುತ್ತಿರಲಿಲ್ಲ. ಇನ್ನಾದರೂ ವಿದ್ಯಾವಂತರು ಪ್ರಬುದ್ಧರು ಗ್ರಾಮದ ಅಭಿರುದ್ಧಿ ಕುರಿತು ಯೋಚಿಸಿ ಮಕ್ಕಳ ಶಿಕ್ಷಣ ಕ್ಷೇತ್ರಕ್ಕೆ ಸುಧಾರಣೆ ತರಲು ಮುಂದಾಗಬೇಕು.

**"ಉಟಕನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮೊದಲ ಪ್ರೌಢ ಶಾಲೆ" ಹೊಂದಿದ್ದು ಇವರೆಗೆ ಕಾಲೇಜು ಶಿಕ್ಷಣ ದೊರೆಯದೆ ವಿದ್ಯಾರ್ಥಿಗಳು ಹೆಚ್ಚಿನ ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಇದನ್ನು ಗಮನಿಸಿ ಜನಪ್ರತಿನಿದಿನಗಳು ಕಾಲೇಜು ಮಂಜೂರು ಮಾಡಲು ಶ್ರಮಿಸಬೇಕು.**
**–:ಶರಬಣ್ಣ ಕುಂಬಾರ ಗ್ರಾಮಸ್ಥರು**

## ಜೂ.1ರಿಂದ ಹೊಸ ಕೋರ್ಟ್‌ನಲ್ಲಿ ನಟ ದರ್ಶನ್ ಕೇಸ್ ವಿಚಾರಣೆ



**ಬೆಂಗಳೂರು,ಮೇ.23–** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪಿ ದರ್ಶನ್ ಅಂಡ್ ಗ್ಯಾಂಗ್ ವಿರುದ್ಧದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಿರುವ ಮಹತ್ವದ ಆದೇಶದ ಪ್ರತಿಯನ್ನು ದರ್ಶನ್ ಪರ ವಕೀಲರು ಬೆಂಗಳೂರಿನ ಸೆಷನ್ಸ್ ಕೋರ್ಟ್‌ಗೆ ಅಧಿಕೃತವಾಗಿ ಸಲ್ಲಿಸಿದ್ದಾರೆ.

ಈ ಆದೇಶದ ಅನ್ವಯ, ಪ್ರಕರಣದ ತ್ವರಿತಗತಿ ವಿಚಾರಣೆ ನಡೆಸುವ ಹಾಗೂ ಆರೋಪಿಗಳಿಗೆ ಒದಗಿಸಬೇಕಾದ ಕನಿಷ್ಠ ಸೌಲಭ್ಯಗಳ ಮಾರ್ಗಸೂಚಿಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು ಎಂಬುದರ ಕುರಿತು ಸೆಷನ್ಸ್ ನ್ಯಾಯಾಲಯವು ಮುಂದಿನ ಮಹತ್ವದ ನಿರ್ಧಾರ ಕೈಗೊಳ್ಳಲಿದೆ.
ಪ್ರಕರಣದ ಗಂಭೀರತೆಯನ್ನು ಪರಿಗಣಿಸಿರುವ ಸುಪ್ರೀಂ ಕೋರ್ಟ್, ತ್ವರಿತಗತಿ ತನಿಖೆಗೆ ಕಟ್ಟುನಿಟ್ಟಿನ ಗಡುವು ವಿಧಿಸಿದ್ದು, ಮುಂಬರುವ ಒಂದು ವರ್ಷದ ಅವಧಿಯಲ್ಲಿ ಪ್ರಕರಣದ ಪ್ರಮುಖ 60 ಸಾಕ್ಷಿಗಳ ವಿಚಾರಣೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು ಎಂದು ಸ್ಪಷ್ಟ ನಿರ್ದೇಶನ ನೀಡಿದೆ.

ಇದೇ ವೇಳೆ ರಾಜ್ಯದ ಪೊಲೀಸ್ ಠಾಣಾವಾರು ಸೆಷನ್ಸ್ ಕೋರ್ಟ್‌ಗಳ ಹೊಸ ನಿಯೋಜನೆ ಪ್ರಕ್ರಿಯೆ ನಡೆದಿದ್ದು, ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯ ವ್ಯಾಪ್ತಿಯ ಕೇಸ್‌ಗಳ ಹಂಚಿಕೆಯಲ್ಲಿ ಪ್ರಮುಖ ಬದಲಾವಣೆಯಾಗಿದೆ. ಇದರ ಅನ್ವಯ, ಈವರೆಗೆ ಇಂಚಾರ್ಜ್ ಕೋರ್ಟ್‌ನಲ್ಲಿ 2ನೇ ಪುಟಕ್ಕೆ

# ಇಂಧನ ಕೊರತೆಯ ಬೆಲೆ ಏರಿಕೆ ಬಿಸಿ: ಸಾವಿರಾರು ಕಾರ್ಮಿಕರಿಗೆ ಉದ್ಯೋಗ ಕಳೆದುಕೊಳ್ಳುವ ಭೀತಿ

## ರಾಜಕೀಯವಲ್ಲ, ಜನರ ಸಮಸ್ಯೆ ಕುರಿತು ಎಚ್ಚರಿಕೆ: ಎಸ್. ಹೆಚ್. ಸಾಜಿದ್ ಖಾದ್ರಿ

ಧೈರ್ಯದ ದಾರಿ

**ಮಾನ್ವಿ:** ಯುದ್ಧ ಪರಿಸ್ಥಿತಿ ಮತ್ತು ಇಂಧನ ಪೂರೈಕೆಯಲ್ಲಿ ಉಂಟಾಗುತ್ತಿರುವ ಕೊರತೆಯಿಂದ ದೇಶದಲ್ಲಿ ಬೆಲೆ ಏರಿಕೆ ಸಂಭವಿಸುವ ಸಾಧ್ಯತೆಯ ಬಗ್ಗೆ ಈಗಾಗಲೇ ಎಚ್ಚರಿಕೆ ನೀಡಲಾಗಿದೆ. ಈ ಹಿನ್ನೆಲೆ ಬೆಲೆ ಏರಿಕೆಯಿಂದ ಸಾಮಾನ್ಯ ಜನರು ಹಾಗೂ ಕಾರ್ಮಿಕ ವರ್ಗ ಎದುರಿಸಬಹುದಾದ ಸಂಕಷ್ಟಗಳ ಬಗ್ಗೆ ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದೆ.

ಈ ಕುರಿತು ಮಾತನಾಡಿದ ಮಾನ್ವಿಯ ಎಸ್. ಹೆಚ್. ಸಾಜಿದ್ ಖಾದ್ರಿ ಅವರು, “ನಾನು ಯಾವುದೇ ರಾಜಕೀಯ ಪಕ್ಷದ ಪರ ಅಥವಾ ವಿರೋಧವಾಗಿ ಮಾತನಾಡುತ್ತಿಲ್ಲ. ಪರಿಸ್ಥಿತಿಯನ್ನು ಎಲ್ಲರೂ ಗಂಭೀರವಾಗಿ ಅವಲೋಕಿಸಬೇಕು,” ಎಂದು ಹೇಳಿದರು.
ಇಂಧನ ಕೊರತೆಯಿಂದ ಪೆಟ್ರೋಲ್ ಬಂಕ್‌ಗಳ ವ್ಯವಹಾರ ಕಡಿಮೆಯಾಗುವ ಸಾಧ್ಯತೆ ಇದೆ. ಇದರಿಂದ ಬಂಕ್ ಮಾಲೀಕರಿಗೆ ಸಿಬ್ಬಂದಿಗಳ ವೇತನ ನೀಡುವುದು ಕಷ್ಟವಾಗಬಹುದು. ಪರಿಣಾಮವಾಗಿ ಸಿಬ್ಬಂದಿ ಕಡಿತ ಅನಿವಾರ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.ಒಂದು ಪೆಟ್ರೋಲ್ ಬಂಕ್‌ನಲ್ಲಿ




ಸರಾಸರಿ 10 ಮಂದಿ ಕೆಲಸ ಮಾಡುತ್ತಾರೆ. ವ್ಯವಹಾರ ಕುಂಠಿತವಾದರೆ ಕನಿಷ್ಠ ಐದು ಮಂದಿಯನ್ನು ಕೆಲಸದಿಂದ ತೆಗೆದುಹಾಕುವ ಪರಿಸ್ಥಿತಿ ಉಂಟಾಗಬಹುದು. ಒಂದು ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 50 ಪೆಟ್ರೋಲ್ ಬಂಕ್‌ಗಳಿವೆ ಎಂದು ಅಂದಾಜಿಸಿದರೆ, ಒಂದೇ ಕ್ಷೇತ್ರದಲ್ಲಿ ಸುಮಾರು 250 ಕಾರ್ಮಿಕರು ಉದ್ಯೋಗ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಅವರು ವಿವರಿಸಿದರು.ರಾಯಚೂರು ಜಿಲ್ಲೆಯಲ್ಲಿ ಏಳು ವಿಧಾನಸಭಾ ಕ್ಷೇತ್ರಗಳಿದ್ದು, ಈ ಲೆಕ್ಕಾಚಾರ ಪ್ರಕಾರ ಸುಮಾರು 1,750 ಕಾರ್ಮಿಕರು ನಿರುದ್ಯೋಗ ಸಮಸ್ಯೆ ಎದುರಿಸಬೇಕಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು. ಇದೇ ಪರಿಸ್ಥಿತಿ ರಾಜ್ಯ ಹಾಗೂ ದೇಶದ ಮಟ್ಟದಲ್ಲಿಯೂ ಉಂಟಾದರೆ ಸಾವಿರಾರು ಕುಟುಂಬಗಳು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದರು.ಇಂಧನ ಕೊರತೆಯಿಂದ ಅನೇಕ ವ್ಯಾಪಾರ ವಹಿವಾಟುಗಳು ಕುಂಠಿತಗೊಂಡು ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರುವ ಸಾಧ್ಯತೆ ಇದೆ. ಇದರಿಂದ ಸಾಮಾನ್ಯ ಜನರ ಜೀವನ ಮತ್ತಷ್ಟು ದುಬಾರಿಯಾಗಲಿದೆ ಎಂದು ಅವರು ಹೇಳಿದರು.



**ಸರ್ಕಾರಗಳು, ಜನಪ್ರತಿನಿಧಿಗಳು ಹಾಗೂ ಉನ್ನತ ಅಧಿಕಾರಿಗಳು ಕಾರ್ಮಿಕರು ಮತ್ತು ಅವರ ಕುಟುಂಬಗಳ ಸಂಕಷ್ಟವನ್ನು ಮನಗಂಡು ಬೆಲೆ ಏರಿಕೆಯ ಪರಿಣಾಮ ತಗ್ಗಿಸಲು ಸೂಕ್ತ ಯೋಜನೆಗಳನ್ನು ರೂಪಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಮನವಿ ಮಾಡಿದರು.**
**–ಎಸ್. ಹೆಚ್. ಸಾಜಿದ್ ಖಾದ್ರಿ**
**ಮಾನ್ವಿ, ರಾಯಚೂರು ಜಿಲ್ಲೆ**

## ಎರಡನೇ ಅತಿದೊಡ್ಡ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಶಂಕು ಸ್ಥಾಪನೆ



**ಆನೇಕಲ್‌ನ ಇಂಡ್ಲವಾಡಿ ಗ್ರಾಮದಲ್ಲಿ ನಿರ್ಮಾಣಗೊಳ್ಳಲಿರುವ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಂಕು ಸ್ಥಾಪನೆ ನೆರವೇರಿಸಿದರು. ಸಚಿವರಾದ ಡಾ. ಜಿ. ಪರಮೇಶ್ವರ್, ಬಿ.ಜೆಡ್. ಜಮೀರ್ ಅಹ್ಮದ್ ಖಾನ್, ಮಾಜಿ ಸಂಸದ ಡಿ.ಕೆ. ಸುರೇಶ್, ಶಾಸಕರಾದ ಬಿ. ಶಿವಣ್ಣ, ಎಂ. ಕೃಷ್ಣಪ್ಪ ಮತ್ತಿತರರು ಉಪಸ್ಥಿತರಿದ್ದರು.**

**ಬೆಂಗಳೂರು, ಮೇ. 23–** ದೇಶದ ಎರಡನೇ ಅತಿ ದೊಡ್ಡ ಕ್ರಿಕೆಟ್ ಸ್ಟೇಡಿಯಂಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಶಂಕು ಸ್ಥಾಪನೆ ನೆರವೇರಿಸಿದರು.
ನಗರದ ಹೃದಯಭಾಗದಲ್ಲಿರುವ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್ ಸಿಬಿ ಕಳೆದ ಬಾರಿ ಐಪಿಎಲ್ ಚಾಂಪಿಯನ್ ಪಟ್ಟ ಅಲಂಕರಿಸಿದ ಹಿನ್ನೆಲೆಯಲ್ಲಿ ನಡೆದ ವಿಜಯೋತ್ಸವದ ವೇಳೆ ಕಾಲ್ತುಳಿತ ಸಂಭವಿಸಿತ್ತು. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಹೊರವಲಯದ ಆನೇಕಲ್ ತಾಲ್ಲೂಕಿನ ಸೂರ್ಯನಗರದ 4ನೇ ಹಂತದಲ್ಲಿ ಈ ಕ್ರೀಡಾಂಗಣ ನಿರ್ಮಾಣಕ್ಕೆ ಶಂಕುಸ್ಥಾಪನೆ ಗೆ ಚಾಲನೆ ನೀಡಲಾಗಿದೆ.

ಗುಜರಾತ್ ನ ಅಹ್ಮದಾಬಾದ್ ನಲ್ಲಿರುವ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ 1.32 ಲಕ್ಷ ಸೀಟು ಸಾಮರ್ಥ್ಯ ಹೊಂದಿದೆ. ಆನೇಕಲ್ ಬಳಿ ತಲೆಯೆತ್ತಲಿರುವ ಈ ಸ್ಟೇಡಿಯಂ ಸಾಮರ್ಥ್ಯ 80 ಸಾವಿರ ಆಸನಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ.

ಮೊದಲ ಹಂತದಲ್ಲಿ ಕ್ರಿಕೆಟ್ ಸ್ಟೇಡಿಯಂ ಕ್ರೀಡಾಂಗಣದ ಮುಂಭಾಗ ರಾಜ್ಯದ ಕಲೆ ಸಾಂಸ್ಕೃತಿಕ ಬಿಂಬಿಸುವ ಪರಂಪರೆ, ಕ್ರಿಕೆಟ್‌ನ ಇತಿಹಾಸ ವಿನ್ಯಾಸ, 2ನೇ ಹಂತದಲ್ಲಿ ಒಳಾಂಗನ ಕ್ರೀಡಾಂಗಣ ಈಜುಕೊಳ ಹಾಗೂ ಬೃಹತ್ ಸಮಾವೇಶ ಸಭಾಂಗಣ ನಿರ್ಮಿಸಲಾಗಿತ್ತು. ಇದಕ್ಕೆ ಕೆಹೆಚ್ ಬಿ ಸೂರ್ಯ ಕ್ರೀಡಾ ಗ್ರಾಮ ಎಂದು ನಾಮಕರಣ ಮಾಡಲಾಗಿದೆ.

ಈ ಕ್ರೀಡಾಂಗಣ ವೆಚ್ಚ 9,43.46 ಕೋಟಿ ವೆಚ್ಚವಾಗಲಿದೆ. ಈ ಕ್ರೀಡಾಂಗಣ ನಿರ್ಮಾಣಕ್ಕಾಗಿ ಟೆಂಡರ್ ಆಹ್ವಾನಿಸಲಾಗಿದೆ. ಚಿನ್ನಸ್ವಾಮಿ ಕ್ರೀಡಾಂಗಣದ ಮೇಲಿನ ಒತ್ತಡ ಕಡಿಮೆ ಮಾಡಲು ಹಾಗೂ ವರ್ಷಪೂರ್ತಿ ಜಾಗತಿಕ ಮಟ್ಟದ ಕ್ರೀಡಾ ಪಂದ್ಯಗಳನ್ನು ಆಯೋಜಿಸಲು ನಗರದ ಹೊರವಲಯದಲ್ಲಿ ಈ ಬೃಹತ್ ಕ್ರೀಡಾಂಗಣ ತಲೆಯೆತ್ತಲಿದೆ.

# ಕಾಕ್ರೋಚ್ ಜನತಾ ಪಾರ್ಟಿ ಸಮಾವೇಶಕ್ಕೆ ಅನುಮತಿ ಪೊಲೀಸರಿಗೆ ಬಿಟ್ಟ ವಿಚಾರ

**ಬೆಂಗಳೂರು, ಮೇ 23–** ನಗರದ ಟೌನ್‌ಹಾಲ್ ಬಳಿ ನಾಳೆ ನಡೆಯಬೇಕಿದ್ದ ಕಾಕ್ರೋಚ್ ಜನತಾ ಪಾರ್ಟಿ ಬಹಿರಂಗ ಸಭೆಗೆ ಅನುಮತಿ ಕೊಡುವುದು ಅಥವಾ ಬಿಡುವುದು ಪೊಲೀಸರಿಗೆ ಬಿಟ್ಟ ವಿಚಾರ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಇಂದಿಲ್ಲಿ ಪ್ರತಿಕ್ರಿಯಿಸಿದರು.

ನಗರದಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಯಾರಾದರೂ ಒಂದು ಸಮಾವೇಶ ಮಾಡುತ್ತಾರೆ ಎಂದರೆ ಯಾವ ಉದ್ದೇಶಕ್ಕೆ ಮಾಡುತ್ತಿದ್ದಾರೆ, ಸಮಾವೇಶಕ್ಕೆ ಯಾರೆಲ್ಲಾ ಬರುತ್ತಿದ್ದಾರೆ ಎಂಬುದನ್ನು ಪೊಲೀಸರು ಪರಿಶೀಲಿಸುತ್ತಾರೆ. ಅದು ಅವರ ಕರ್ತವ್ಯ ಎಂದು ಹೇಳಿದರು.

ಕಾಕ್ರೋಚ್ ಜನತಾ ಪಾರ್ಟಿ ಸಮಾವೇಶಕ್ಕೆ ಪೊಲೀಸರು ಅನುಮತಿ ನಿರಾಕರಿಸಿದ್ದಾರೆ ಎಂದರೆ ಏನಾದರೂ ಅಂಶಗಳು ಇರಬೇಕಲ್ಲ ಎಂದು ಅವರು ಪ್ರಶ್ನಿಸಿದರು.
ನಮ್ಮ ಪಕ್ಷ, ನಾಯಕರ ಬೆಂಬಲ ಬೇರೆ. ಪೊಲೀಸರ ಕೆಲಸ ಪೊಲೀಸರು ಮಾಡುತ್ತಾರೆ. ರಾಜಕಾರಣಿ ಮಾಡುವ ಕೆಲಸ ರಾಜಕಾರಣಿಗಳು ಮಾಡುತ್ತಾರೆ. ಕಾನೂನು ಸುವ್ಯವಸ್ಥೆ ಕಾಪಾಡುವ ಕೆಲಸವನ್ನು ಪೊಲೀಸರು ಮಾಡುತ್ತಾರೆ. ಹಾಗಾಗಿ ಅನುಮತಿ ಕೊಡುವುದು, ಬಿಡುವುದು ಪೊಲೀಸ್ ಅಧಿಕಾರಿಗಳಿಗೆ ಬಿಟ್ಟ



ವಿಚಾರ ಎಂದರು. ದರ್ಶನ್ ಆತ್ಮಹತ್ಯೆ ವದಂತಿ ವಿಚಾರದ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಈ ವಿಚಾರ ಬಗ್ಗೆ ನಾನು ಪೊಲೀಸ್ ಅಧಿಕಾರಿಗಳನ್ನು ಮೌಖಿಕವಾಗಿ ಕೇಳಿದಾಗ ಆ ರೀತಿಯ ಘಟನೆ ನಡೆದಿಲ್ಲವೆಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರ ಹೊರತು ಇನ್ನೇನೂ ವಿಚಾರ ಇಲ್ಲ ಎಂದು ತಿಳಿಸಿದರು.

ಸಂಪುಟ ಪುನಾಚರನೆಗೂ ರಾಜ್ಯಸಭೆ, ಪರಿಷತ್ ಚುನಾವಣೆಗೂ ಸಂಬಂಧ ಇಲ್ಲ. ಅದರ ಪಾಡಿಗೆ ಅದು ನಡೆಯುತ್ತದೆ. ಅಭ್ಯರ್ಥಿಗಳ ಬಗ್ಗೆ ನಮ್ಮ ಹೈಕಮಾಂಡ್, ಅಧ್ಯಕ್ಷರು ಹಾಗೂ ಮುಖ್ಯಮಂತ್ರಿಗಳು ತೀರ್ಮಾನಿಸುತ್ತಾರೆ ಎಂದರು. ಸಂಪುಟ ಪುನಾರಚನೆಗೆ ಶಾಸಕರು ಒತ್ತಾಯಿಸುವುದರಲ್ಲಿ ತಪ್ಪೇನಿಲ್ಲ. ಸಚಿವರಾಗಲೂ ಅವರಿಗೂ ಸಾಮರ್ಥ್ಯ ಇದೆ. ಆದರೆ ಸಂಪುಟದಲ್ಲಿ ಶೇ. 15 ರಷ್ಟು ಮಾತ್ರ ಖಾತೆಗಳ ಭರ್ತಿ ಮಾಡಿಕೊಳ್ಳಬೇಕು ಎಂದಿದೆ. ಹಾಗಾಗಿ ಸಂಖ್ಯೆಗಳು ಕಡಿಮೆ ಇರುತ್ತವೆ ಎಂದ ಅವರು, ಕೆಲ ಹಿರಿಯ ಸಚಿವರನ್ನು ಸಂಪುಟದಿಂದ ಕೈಬಿಡುತ್ತಾರೆ ಎಂಬ ವಿಚಾರ ಹೈಕಮಾಂಡ್‌ಗೆ ಬಿಟ್ಟದ್ದು. ಆ ಬಗ್ಗೆ ನಾನೇನು ಪ್ರತಿಕ್ರಿಯಿಸುವುದಿಲ್ಲ ಎಂದರು.

ಖಾತೆ ಬದಲಾವಣೆಗೆ ಕೇಳಿಲ್ಲ
ನನಗೆ ನನ್ನ ಖಾತೆ ಬಗ್ಗೆ ಯಾವುದೇ ಅಸಮಾಧಾನ ಇಲ್ಲ. ಗೃಹ ಖಾತೆಯಲ್ಲಿ ಸಮರ್ಥವಾಗಿ ಕೆಲಸ ಮಾಡುತ್ತಿರುವ ತೃಪ್ತಿ ನನಗಿದೆ. ಇದುವರೆಗೂ ನಾನು 8 ವರ್ಷಗಳ ಕಾಲ ಗೃಹ ಇಲಾಖೆ ನಿಭಾಯಿಸಿದ್ದೇನೆ. ನನಗೇನೂ ಖಾತೆ ಬಗ್ಗೆ ಬೇಸರ ಇಲ್ಲ. ಗೃಹ ಖಾತೆ ಜತೆಗೆ ಇನ್ನೊಂದು ಬೇರೆ ಖಾತೆ ನೀಡಿದರೂ ನಿಭಾಯಿಸುತ್ತೇನೆ ಎಂದರು.
ಮುಖ್ಯಮಂತ್ರಿ ಸ್ಥಾನ ಕೊಟ್ಟರೂ ನಿಭಾಯಿಸುತ್ತೀರಾ ಎಂಬ ಪತ್ರಕರ್ತರ ಪ್ರಶ್ನೆಗೆ ಏನು ಕೊಟ್ಟರೂ ನಾನು ನಿಭಾಯಿಸುತ್ತೇನೆ, ಆ ಸಾಮರ್ಥ್ಯ ನನಗೆ ಇದೆ ಎಂದು ಸಚಿವ ಪರಮೇಶ್ವರ್ ಪ್ರತಿಕ್ರಿಯಿಸಿದರು. 2ನೇಪುಟಕ್ಕೆ►

ಮೊದಲನೇ ಪುಟದಿಂದ

## ಜೂ.1ರಿಂದ ಹೊಸ ಕೋರ್ಟ್‌ನಲ್ಲಿ ನಟ ದರ್ಶನ್ ಕೇಸ್ ವಿಚಾರಣೆ

ನಡೆಯುತ್ತಿದ್ದ ರೇಣುಕಾಸ್ವಾಮಿ ಕೊಲೆ ಕೇಸಿನ ಒಟ್ಟು ವಿಚಾರಣೆಯು ಮುಂಬರುವ ಜೂನ್ 1ರಿಂದ ಅಧಿಕೃತವಾಗಿ 59ನೇ ಸೆಷನ್ಸ್ ನ್ಯಾಯಾಲಯಕ್ಕೆ ವರ್ಗಾವಣೆಗೊಳ್ಳಲಿದ್ದು,
ಮಾನ್ಯ ನ್ಯಾಯಾಧೀಶರಾದ ಸುಜಾತಾ ಎಂ. ಸಾಮ್ರಾಣಿ ಅವರ ನೇತೃತ್ವದಲ್ಲಿ ಈ ಹೈಪ್ರೊಫೈಲ್ ಕೊಲೆ ಪ್ರಕರಣದ ಅಸಲಿ ಟ್ರಯಲ್ ಮತ್ತು ಸಾಕ್ಷಿ ವಿಚಾರಣೆಗಳು ಜರುಗಲಿದೆ.
ಮತ್ತೊಂದೆಡೆ, ಇದೇ ಪ್ರಕರಣದಲ್ಲಿ ಈಗಾಗಲೇ ಜಾಮೀನು ಪಡೆದು ಹೊರಗಿರುವ ಐದು ಜನ ಆರೋಪಿಗಳ ಜಾಮೀನನ್ನು ತಕ್ಷಣವೇ ರದ್ದುಗೊಳಿಸಬೇಕು ಎಂದು ಪ್ರಾಸಿಕ್ಯೂಷನ್ ಪರ ವಕೀಲರು ಸಲ್ಲಿಸಿದ್ದ ಅರ್ಜಿಯ ಸುದೀರ್ಘ ವಿಚಾರಣೆ ನಡೆಸಿರುವ ಕರ್ನಾಟಕ ಹೈಕೋರ್ಟ್, ಸದ್ಯ ತನ್ನ ತೀರ್ಪನ್ನು ಕಾಯ್ದಿರಿಸಲಾಗಿದೆ.

ಮಹತ್ವದ ಬೆಳವಣಿಗೆಯ ಬೆನ್ನಲ್ಲೇ, ಹೈಕೋರ್ಟ್‌ಗೂ ಸಹ ಸುಪ್ರೀಂ ಕೋರ್ಟ್ ನೀಡಿರುವ ಆದೇಶದ ಪ್ರತಿಯನ್ನು ಸಲ್ಲಿಕೆ ಮಾಡಲಾಗಿದೆ. ಮುಂಬರುವ ಸೋಮವಾರದಂದು ರೇಣುಕಾಸ್ವಾಮಿ ಕೊಲೆ ಪ್ರಕರಣದ ಮುಂದಿನ ಹಂತದ ವಿಚಾರಣೆ ನ್ಯಾಯಾಲಯದಲ್ಲಿ ನಿಗದಿಯಾಗಿದ್ದು, ಅಂದು ಸುಪ್ರೀಂ ಕೋರ್ಟ್ ಆದೇಶದ ಅನ್ವಯ 59ನೇ ಸೆಷನ್ಸ್ ಕೋರ್ಟ್ ಕೈಗೊಳ್ಳಲಿರುವ ಮುಂದಿನ ಕ್ರಮಗಳು ಹಾಗೂ ಹೈಕೋರ್ಟ್‌ನಲ್ಲಿ ಕಾಯ್ದಿರಿಸಲಾಗಿರುವ ಐದು ಜನ ಆರೋಪಿಗಳ ಜಾಮೀನು ರದ್ದತಿ ಅರ್ಜಿಯ ಭವಿಷ್ಯದ ದೃಷ್ಟಿಯಿಂದ ಸೋಮವಾರದ ಕೋರ್ಟ್ ಕಲಾಪ ಇಡೀ ರಾಜ್ಯದಾದ್ಯಂತ ತೀವ್ರ ಕುತೂಹಲ ಮೂಡಿಸಿದೆ.

## ಕಾಕ್ರೋಚ್ ಜನತಾ ಪಾರ್ಟಿ ಸಮಾವೇಶಕ್ಕೆ ಅನುಮತಿ ಪೊಲೀಸರಿಗೆ ಬಿಟ್ಟ ವಿಚಾರ

ಬಕ್ರೀದ್ ಹಬ್ಬಗೆ ರಕ್ಷಣೆ ಕೋರಿ ವಕ್ಫ್ ಬೋರ್ಡ್ ಮುಖ್ಯಸ್ಥರು ಪತ್ರ ಬರೆದಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೊಡ್ಡ ದೊಡ್ಡ ಹಬ್ಬಗಳಾದಾಗ ಪೊಲೀಸರು ಎಚ್ಚರಿಕೆ ವಹಿಸುತ್ತಾರೆ. ಅದು ಅವರ ಕರ್ತವ್ಯ. ಇಂತಹ ಹಬ್ಬಗಳಿಗೆ ಮತ್ತಷ್ಟು ಹೆಚ್ಚುವರಿ ಎಚ್ಚರಿಕೆ ವಹಿಸಬೇಕು. ಆ ಕೆಲಸವನ್ನು ಪೊಲೀಸರು ಮಾಡುತ್ತಾರೆ ಎಂದರು.
ವಕ್ಫ್ ಬೋರ್ಡ್‌ನವರಿಗೆ ಏನು ಆತಂಕ ಇದೆಯೋ ಗೊತ್ತಿಲ್ಲ, ಅವರು ಪತ್ರ ಬರೆದಿದ್ದರೆ ಅದಕ್ಕೆ ಯಾವ ರೀತಿ ಸ್ಪಂದಿಸಬೇಕೋ ಅದರಂತೆ ಪೊಲೀಸರು ಸ್ಪಂದಿಸುತ್ತಾರೆ ಎಂದು ಅವರು ಹೇಳಿದರು.

ಲಾಡ್ಲೆ ಮಶಾಕ್ ದರ್ಗಾ ಕೇಸ್‌ಗಳ ವಾಪಸ್‌ಗೆ ಬಿಜೆಪಿ, ಹಿಂದೂಪರ ಸಂಘಟನೆಗಳು ವಿರೋಧ ಮಾಡುವುದು ಅವರಿಗೆ ಬಿಟ್ಟ ವಿಚಾರ. ಎಲ್ಲರನ್ನೂ ಸರಿ ಸಮಾನವಾಗಿ ನೋಡಿಕೊಳ್ಳಬೇಕು ಎಂದು ಸಂವಿಧಾನದಲ್ಲಿದೆ. ಕಾಂಗ್ರೆಸ್ ಅದನ್ನೇ ಮಾಡುತ್ತಿದೆ. ಹೆಚ್ಚುವರಿಯಾಗಿ ಪಕ್ಷ ಏನನ್ನು ಮಾಡುತ್ತಿಲ್ಲ ಎಂದರು.

ಹಿಂದುಳಿದವರು, ತುಳಿತಕ್ಕೆ, ನಿರ್ಲಕ್ಷ್ಯಕ್ಕೆ ಒಳಗಾದವರಿಗೆ ಒಂದಿಷ್ಟು ಕಾರ್ಯಕ್ರಮ ಕೊಡುವುದು ಕಾಂಗ್ರೆಸ್ ಕೆಲಸ. ಇದೇನು ಹೊಸದಲ್ಲ, 1947 ರಿಂದಲೇ ಈ ಕೆಲಸವನ್ನು ಕಾಂಗ್ರೆಸ್ ಪಕ್ಷ ಮಾಡಿಕೊಂಡು ಬಂದಿದೆ ಎಂದು ತಿಳಿಸಿದರು.

# ಪ್ರಕೃತಿ ವಿಕೋಪ: ತುರ್ತು ಸಂದರ್ಭದಲ್ಲಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕುಜಿಲ್ಲಾಧಿಕಾರಿ ಡಾ. ಆನಂದ ಸೂಚನೆ

**ವಿಜಯಪುರ, ಮೇ 23:**ಮುಂಗಾರು ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸರ್ವಸನ್ನದ್ಧವಾಗಿದ್ದು, ಮಳೆಗಾಲದಲ್ಲಿ ಪ್ರಕೃತಿ ವಿಕೋಪ, ಪ್ರವಾಹದಲ್ಲಿ ಜೀವ ಹಾನಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಅಧಿಕಾರಿಗಳು ಮೊದಲ ಆದ್ಯತೆ ನೀಡುವುದರೊಂದಿಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.
ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ 2026–27 ನೇ ಸಾಲಿನ ಮುಂಗಾರು ಮಳೆ ಅವಧಿಯ ಪೂರ್ವಸಿದ್ಧತೆ ಕುರಿತ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ತುರ್ತು ಪರಿಸ್ಥಿತಿಯ ನಿರ್ವಹಣೆಗಾಗಿ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ಕೇಂದ್ರಸ್ಥಾನದಲ್ಲೇ ಇರಬೇಕು ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಹೆಲ್ಪ್ ಲೈನ್ ಸ್ಥಾಪಿಸಿ:
ತಾಲೂಕಾ ಹಂತದಲ್ಲಿ ಸಂಭವಿಸುವ ಪ್ರಕೃತಿ ವಿಕೋಪ ಸಂದರ್ಭದಲ್ಲಿ ತಹಶೀಲ್ದಾರರು ಸ್ಥಳದಲ್ಲಿರಬೇಕು. ಅತ್ಯಂತ ಜವಾಬ್ದಾರಿಯಿಂದ ಹಾಗೂ ಅಚ್ಚುಕಟ್ಟಾಗಿ ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿ ಪರಿಹರಿಸಬೇಕು ಎಂದರು. ಎಲ್ಲ ತಾಲೂಕಿನಲ್ಲಿ ದಿನದ ಇಪ್ಪತ್ನಾಲ್ಕು ಗಂಟೆ ಹೆಲ್ಪಲೈನ್ ಸ್ಥಾಪಿಸಬೇಕು.
ಯಾವುದೇ ಘಟನೆ ಸಂಭವಿಸಿದ ತಕ್ಷಣ ಸ್ಪಂದಿಸಿ, ಸ್ಥಳಕ್ಕೆ ಧಾವಿಸಬೇಕು, ಪ್ರವಾಹ, ಕಲುಷಿತ ನೀರು, ಕೊಠಡಿ ಸ್ಥಳಾಂತರ ಇತ್ಯಾದಿ ಸಂದರ್ಭದಲ್ಲಿ ತಕ್ಷಣ ಸ್ಪಂದಿಸಬೇಕು. ಕಂಟ್ರೋಲ್ ರೂಂ ವ್ಯವಸ್ಥಿತವಾಗಿ ನಿರ್ವಹಿಸಬೇಕು. ಕಂಟ್ರೋಲ್ ರೂಂನಲ್ಲಿದ್ದವರು ಎಲ್ಲ ಇಲಾಖೆಯ ಸಂಪರ್ಕ ಸಂಖ್ಯೆ ಹೊಂದಿರಬೇಕು. ಅವರು ತಕ್ಷಣ ಸಂಬಂಧಿಸಿದವರಿಗೆ ತಿಳಿಸಬೇಕು ಎಂದರು.
ಪ್ರವಾಹ ಪರಿಸ್ಥಿತಿ ಮಳೆಗಾಲ ಆರಂಭವಾಗುತ್ತಿದ್ದಂತೆಯೇ ಜಿಲ್ಲೆಯ ಕೃಷ್ಣಾ, ಭೀಮಾ ಮತ್ತು ದೋಣಿ ನದಿಗಳಿಗೆ ಯಾವುದೇ ಸಂದರ್ಭದಲ್ಲಿ ಪ್ರವಾಹ ಬರಬಹುದು. ಹಾಗಾಗಿ ನದಿ ಪಾತ್ರದಲ್ಲಿ ನಿರಂತರ ನಿಗಾ ಮತ್ತು ಪ್ರವಾಹ ಮುನ್ನೆಚ್ಚರಿಕೆ ವಹಿಸಬೇಕು. ಮಳೆ ಹಾಗೂ ಜಲಾಶಯಗಳಲ್ಲಿನ ನೀರಿನ ಲಭ್ಯತೆಯ ಮಾಹಿತಿಯನ್ನು ಪ್ರತಿದಿನ ಸಂಗ್ರಹಿಸಿ, ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಅವರು, ಪ್ರಕೃತಿ ವಿಕೋಪದಿಂದ ಉಂಟಾಗುವ ಹಾನಿಗಳಿಗೆ ನಿಯಮಾನುಸಾರ ತಕ್ಷಣವೇ ಪರಿಹಾರ ವಿತರಿಸಲು ಕ್ರಮ ವಹಿಸಬೇಕು ಎಂದರು.
ಭೀಮಾ ನದಿ ಸೇರಿದಂತೆ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ಎದುರಿಸಲು ಈಗಲೇ ಸಿದ್ಧತೆ ಮಾಡಿಕೊಳ್ಳಬೇಕು.
ತುರ್ತು ಸಂದರ್ಭದಲ್ಲಿ ರಕ್ಷಣಾ ಸಾಮಗ್ರಿ ಬೋಟ್ಸ್, ರೋಪ್ಸ್, ಲೈಫ್ ಜಾಕೆಟ್, ಇತ್ಯಾದಿ ಸಾಮಗ್ರಿಗಳನ್ನು ತಾಲೂಕಾ ಹಾಗೂ ಜಿಲ್ಲಾ ಮಟ್ಟದಲ್ಲಿ ಸುಸಜ್ಜಿತವಾಗಿಟ್ಟುಕೊಳ್ಳಬೇಕು ಎಂದರು.
ಕೃಷ್ಣಾ–ಭೀಮಾ ನದಿ ಒಳ ಹರಿವು ನಿರಂತರ ಸಾಧಿಸಿ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಆಗಾಗ ತಾಲೂಕಾ ಮಟ್ಟದಲ್ಲಿ ವಿಪತ್ತು ಸಭೆ ನಡೆಸಿ ಪ್ರವಾಹ ಎದುರಿಸಲು ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಅಗತ್ಯ ಸಲಹೆ–ಸೂಚನೆಗಳನ್ನು ನೀಡಬೇಕು. ನದಿ ಪಾತ್ರದ ಜನರು ಮುನ್ನೆಚ್ಚರಿಕೆ ವಹಿಸಲು ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.
ರಾಜ ಕಾಲುವೆಗಳಲ್ಲಿ ಮೆತ್ತಿಕೊಂಡಿರುವ ಹೂಳನ್ನು ಸಂಪೂರ್ಣವಾಗಿ ತೆಗೆದು, ಅಲ್ಲಿ ನೀರು ಸರಳವಾಗಿ ಹರಿದು ಹೋಗುವಂತೆ ನೋಡಿಕೊಳ್ಳಬೇಕು. ಗ್ರಾಪಂ ಸ್ಥಳೀಯ ಆಡಳಿತ ಹಾಗೂ ಪಾಲಿಕೆ ಅಧಿಕಾರಿಗಳು ಒಂದು ವಾರದಲ್ಲಿ ಈ ಕಾರ್ಯ ಪೂರ್ಣಗೊಳಿಸಿ, ಮಳೆ ಬಂದ ನಂತರ ಪ್ರವಾಹ ಆಗದಂತೆ ನೋಡಿಕೊಳ್ಳಬೇಕು.
ಕಳೆದ ಸಾಲಿನಲ್ಲಿ ಸಮಸ್ಯೆ ಎಲ್ಲಿ ಆಗಿದೆ. ಯಾವ ವಾರ್ಡಿನಲ್ಲಿ ಪ್ರವಾಹ ಸಾಧ್ಯತೆಯಿದೆ ಎನ್ನುವುದನ್ನು ಈಗಲೇ ಗೊತ್ತು ಮಾಡಿಕೊಂಡು, ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಈ ವಿಷಯದಲ್ಲಿ ಸ್ಥಳೀಯವಾಗಿ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಯಾವುದೇ ಸಮಸ್ಯೆಯಾಗದಂತೆ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಇಂದಿನಿಂದಲೇ ಕಾರ್ಯೋನ್ಮುಖರಾಗಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.
ಎಲ್ಲೆಲ್ಲಿ ಸಮಸ್ಯೆಯಾಗುತ್ತದೆ. ಅಲ್ಲಿ ಮೈಕ್ರೋ ಪ್ಲ್ಯಾನಿಂಗ್ ಮಾಡಿಕೊಂಡು ಕಾರ್ಯ ನಿರ್ವಹಿಸಿ, ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾರ್ಯ ನಿರ್ವಹಿಸಬೇಕು. ತಾಲೂಕಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಮುಖ್ಯಾಧಿಕಾರಿಗಳು ಈಗಲೇ ಯೋಜನಾ ಬದ್ಧವಾಗಿ ಕಾರ್ಯ ನಿರ್ವಹಿಸಬೇಕು ಎಂದರು.
ನಗರದಲ್ಲಿ ಪ್ರವಾಹ ಪರಿಸ್ಥಿತಿಯಾಗದಂತೆ ಕೈಗೊಂಡ ಕಾಮಗಾರಿ ಸಿಟಿ ರೌಂಡ್ಸ ಮಾಡಿ, ಪರಿಶೀಲನೆ ನಡೆಸಬೇಕು ಪಾಲಿಕೆ ಆಯುಕ್ತರಿಗೆ ಸೂಚಿಸಿದರು.
ಶಿಥಿಲಾವಸ್ಥೆ ಕಟ್ಟಡಗಳ ಬಗ್ಗೆ ಎಚ್ಚರಿಕೆ:
ಮಣ್ಣು ಹಾಗೂ ಕಟ್ಟಿಗೆ ಮನೆಗಳು ಶಿಥಿಲಾವಸ್ಥೆಯಲ್ಲಿರುವುದರ ಕುರಿತು ಗ್ರಾಮದಲ್ಲಿ ಡಂಗೂರ ಸಾರುವ ಮೂಲಕ ಸಾರ್ವಜನಿಕರಿಗೆ ತಿಳಿವಳಿಕೆ ಮೂಡಿಸಬೇಕು. ಶಿಥಿಲಾವಸ್ಥೆಯಲ್ಲಿರುವ ಮನೆಗಳ ಮಾಹಿತಿಯನ್ನು ತಕ್ಷಣವೇ ಕ್ರೋಢಿಕರಿಸುವುದರೊಟ್ಟಿಗೆ ಜನರಿಗೆ ಮುಂಜಾಗ್ರತೆ ವಹಿಸಲು ತಿಳಿಸಬೇಕು. ಆ ಮೂಲಕ ಜಿಲ್ಲೆಯಾದ್ಯಂತ ಜನ–ಜಾನುವಾರುಗಳ ಹಾನಿಯಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದರು.
ಜಿಲ್ಲೆಯ ಆಲಮೇಲ ತಾಲೂಕಿನ ಮೋರಟಗಿ ಹಾಗೂ ನಿಡಗುಂದಿಯಲ್ಲಿ ಮನೆ ಕುಸಿದು ಜೀವ ಹಾನಿಯಾಗಿದ್ದು, ರಾಜ್ಯ ಮಟ್ಟದಲ್ಲಿ ಗಂಭೀರ ಚರ್ಚೆಯಾಗಿದೆ. ಹಾಗಾಗಿ ಇವೆರಡೂ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿ ಅವಶ್ಯಕ ಮುಂಜಾಗ್ರತಾ ಕ್ರಮ ವಹಿಸಲು ಅಧಿಕಾರಿಗಳು ಈಗಿನಿಂದಲೇ ಸಜ್ಜಾಗಬೇಕು ಎಂದರು.
ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ, ಆಸ್ಪತ್ರೆ , ವಸತಿ ನಿಲಯದ ಕಟ್ಟಡಗಳ ಮಾಹಿತಿ ಕ್ರೋಢಿಕರಿಸಬೇಕು. ಅಲ್ಲೆಲ್ಲ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಇಲ್ಲೆಲ್ಲ ಮಕ್ಕಳ ಹಿತ ಮುಖ್ಯ.ವಾಗಿದೆ. ಹಾಗಾಗಿ ಎಲ್ಲ ಶಿಕ್ಷಕರು ಹಾಗೂ ಮುಖ್ಯ ಶಿಕ್ಷಕರು ತಕ್ಷಣ ಶಾಲೆಗಳಿಗೆ ಭೇಟಿ ನೀಡಿ ಈಗಿನಿಂದಲೇ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.
ಪಿಆರ್ ಇಡಿ ಅಂಗನವಾಡಿ ಶಾಲಾ ಕಟ್ಟಡಗಳನ್ನು ಒಂದು ರೌಂಡ್ ಹೋಗಿ ಪರಿಶೀಲಿಸಬೇಕು. ಕಟ್ಟಡ, ಕಂಪೌಂಡ ವಾಲ್ ಬಗ್ಗೆ ಗಮನ ಹರಿಸಬೇಕು. ಈ ಪ್ರಕ್ರಿಯೆ ತಾಲೂಕು ಮಟ್ಟದ ಮೇಲುಸ್ತುವಾರಿಯಲ್ಲಿ ನಡೆಯಬೇಕು ಎಂದರು.
ತಾಲೂಕಾ ಮಟ್ಟದಲ್ಲಿ ಪರಿಶೀಲನೆಯಾಗಿಲ್ಲ ಎಂದಾದರೆ, ಎಲ್ಲಾ ಕಟ್ಟಡಗಳನ್ನು ಭೌತಿಕವಾಗಿ ಪರಿಶೀಲನೆ ನಡೆಸಬೇಕು. ಒಂದು ವೇಳೆ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದರೆ, ಮಕ್ಕಳನ್ನು ತಾತ್ಕಾಲಿಕವಾಗಿ ಬೇರೆ ಕಟ್ಟಡಗಳಿಗೆ ಸ್ಥಳಾಂತರಿಸುವ ಕೆಲಸ ಮಾಡಬೇಕು ಎಂದರು. ಈ ವಿಷಯವನ್ನು ಗಂಭೀರವಾಗಿ ಪರಿಣಿಸಿ, ಜಿಲ್ಲೆಯ ಎಲ್ಲ ಗ್ರಾಮೀಣ ಹಾಗೂ ನಗರ ಪ್ರದೇಶದ ಶಾಲಾ ಕೊಠಡಿ ಅಂಗನವಾಡಿ, ವಸತಿ ನಿಲಯ, ಆಸ್ಪತ್ರೆಗಳ ಕಟ್ಟಡದ ಸ್ಥಿತಿಗತಿ ಖುದ್ದು ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಈ ವಿಷಯದಲ್ಲಿ ವೈದ್ಯಾಧಿಕಾರಿಗಳು, ಅಂಗನವಾಡಿ ಮಹಿಳಾ ಮೇಲ್ವಿಚಾರಕರು, ವಾರ್ಡನ್ ಗಳು ಸೂಕ್ತ ಸಲಹೆ ಸೂಚನೆ ನೀಡಿ ನಿಗಾವಹಿಸಬೇಕು ಎಂದರು.
ಈ ವಿಷಯದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲೂಕಿನ ಮುಖ್ಯ ಶಿಕ್ಷಕರಿಗೆ ಎಚ್ಚರಿಕೆ ನೀಡುವ ಮೂಲಕ ಒಂದು ವಾರದಲ್ಲಿ ಕಟ್ಟಡ ಮಾಹಿತಿ ಕ್ರೋಢಿಕರಿಸಬೇಕು ಎಂದು ಬಿಇಒಗಳಿಗೆ ಎಚ್ಚರಿಕೆ ನೀಡಿದರು.
ಮಹಿಳಾ ಮತ್ತು ಮಕ್ಕಳ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಇಲಾಖೆಯಡಿ ಬರುವ ಕಟ್ಟಡದಲ್ಲಿನ ಶಿಥಿಲಾವಸ್ಥೆಯಲ್ಲಿರುವ ವಿದ್ಯುತ್ ಕಂಬಗಳು ಹಾಗೂ ವಿದ್ಯುತ್ ಪರಿವರ್ತಕಗಳಮಾಹಿತಿಯನ್ನು ಆಯಾ
ತಹಶೀಲ್ದಾರ್ ರು ಸಮನ್ವಯತೆಯಲ್ಲಿ ನಿಮ್ಮ ಹಂತದಲ್ಲಿ ನಿವಾರಿಸಿಕೊಳ್ಳಬೇಕು ಎಂದರು.
ವಿದ್ಯುತ್ ಅವಘಡಗಳಾದಂತೆ ಎಲ್ಲ ಇಲಾಖೆಗಳು ಗಮನಹರಿಸಬೇಕು. ರಸ್ತೆ ಪಕ್ಕದ ಬೃಹದಾಕಾರದ ಮರದ ಕೊಂಬೆಗಳು ಬೀಳುವಂತಿದ್ದರೆ, ಅವುಗಳನ್ನು ತಕ್ಷಣ ಕಟಾವು ಮಾಡಿಸಬೇಕು. ಖಾಸಗಿ ವ್ಯಾಪ್ತಿಯಲ್ಲೂ ಈ ತರಹದ ಪರಿಸ್ಥಿತಿಯಿದ್ದರೆ, ಕ್ರಮವಹಿಸಿ ಸಾರ್ವಜನಿಕ ಆರೋಗ್ಯ ಮುಖ್ಯವಾಗಿದ್ದು, ಸ್ಥಳೀಯ ಆಡಳಿತ ನಿಗಾವಹಿಸಬೇಕು. ಯಾವುದೇ ಅವಘಡಗಳಾಗದಂತೆ ತುಂಬಾ ಮುತುವರ್ಜಿಯಿಂದ ಕೆಲಸ ಮಾಡಬೇಕು ಎಂದರು.
ತಹಶೀಲ್ದಾರ್‌ರೇ ಹೊಣೆಗಾರರು:
ಶಿಥಿಲಾವಸ್ಥೆಯ ಸೇತುವೆಗಳಿದ್ದರೆ ಅವುಗಳನ್ನು ಗುರುತಿಸಿ. ಅಂತಹವುಗಳಿಗೆ ಬ್ಯಾರಿಕೇಡಿಂಗ್ ಹಾಕಿ ಆ ಪ್ರದೇಶದಲ್ಲಿ ಮಾಹಿತಿ ಫಲಕ ಅಳವಡಿಸಬೇಕು. ಸಂಪೂರ್ಣವಾಗಿ ಪಟ್ಟಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸಲಹೆ ಮಾಡಿದ ಜಿಲ್ಲಾಧಿಕಾರಿಗಳು, ಮಳೆ ಜಾಸ್ತಿಯಾದ ಸಂದರ್ಭದಲ್ಲಿ ಸಂಚಾರಕ್ಕೆ ಸಮಸ್ಯೆಯಾಗುವುದಿದ್ದರೆ ಮುಂಜಾಗ್ರತೆ ಕ್ರಮ ವಹಿಸಬೇಕು. ಸಬ್ ಮರ್ಜ ಆದ ಬ್ರಿಡ್ಜ್ ಯಾವುದೇ ಘಟನೆ ಜರುಗಿದರೆ ತಹಶೀಲ್ದಾರ್ ಅವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.




ಹಾಗಾಗಿ ಸಂಬಂಧಿಸಿದ ಸಿಬ್ಬಂದಿಗೆ ಸೂಕ್ತ ನಿರ್ದೇಶನ ನೀಡಬೇಕು..ಅಪಾಯಕಾರಿ ಬ್ರಿಡ್ಜ್ ತುಂಬಿ ಹರಿಯುವಾಗ ಸೂಕ್ತ ಮುನ್ಸೂಚನೆ ನೀಡಬೇಕು ಎಂದರು.
ಮಳೆಯಾಗುವ ಸಂದರ್ಭದಲ್ಲಿ ಜನರ ಜೀವನ ಮುಖ್ಯವಾಗಿದ್ದು, ಯಾವ ಪ್ರದೇಶದಲ್ಲಿ ಸಮಸ್ಯೆಯಾದರೆ ಡಿಡಿಪಿಐ ತಹಶೀಲ್ದಾರ್ ಅವರೊಂದಿಗೆ ಸಮನ್ವಯ ಮಾಡಿಕೊಂಡು ಅಲ್ಲಿನ ಶಾಲೆಗಳಿಗೆ ರಜೆ ಕೊಡಬಹುದು. ತುರ್ತು ಸಂದರ್ಭದಲ್ಲಿ ಈ ನಿರ್ಣಯ ಮಹತ್ತರವಾದುದು. ಮುಂಗಾರು ಪೂರ್ಣ ಅವಧಿಗೆ ಈ ನಿರ್ಣಯ ತೆಗೆದುಕೊಳ್ಳಬೇಕು ಎಂದರು.
ಲೋಕೋಪಯೋಗಿ ಇಲಾಖೆ ಡೇಂಜರ್ ರಸ್ತೆ, ಸೇತುವೆ, ಹೆದ್ದಾರಿ ಮೇಜರ್ ರಸ್ತೆ ಸ್ಥಿತಿ–ಗತಿಗಳನ್ನು ಗಂಭೀರವಾಗಿ ಗಮನಿಸಬೇಕು. ನಿಗದಿತ ಅವಧಿಯಲ್ಲಿ ಪರಿಹಾರ ಒದಗಿಸಲು ಎಲ್ಲ ತಹಶೀಲ್ದಾರ್ ಗಳು ಕ್ರಮ ಕೈಗೊಳ್ಳಬೇಕು ಎಂದರು.
48 ಗಂಟೆಯಲ್ಲಿ ಪರಿಹಾರ:
ಒಂದು ವೇಳೆ ಕುರಿ ಶೆಡ್ ಸೇರಿದಂತೆ ಜಾನುವಾರುಗಳ ಹಾನಿಯಾದರೆ 48 ಗಂಟೆಗಳ ಅವಧಿಯಲ್ಲಿ ಪರಿಹಾರ ಒದಗಿಸಬೇಕು. ಮನೆ ಹಾನಿಯಾದರೆ 72 ಗಂಟೆಗಳ ಅವಧಿಯಲ್ಲಿ ಕೆಲಾಮಿಟಿ ನಿರ್ದೇಶಾನುಸಾರ ಪರಿಹಾರ ಒದಗಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ ಆಗಬಾರದು.
ಈ ಅಧಿಕಾರಗಳನ್ನು ಎಲ್ಲ ತಹಶೀಲ್ದಾರ್ ಪ್ರದತ್ತಗೊಳಿಸಲಾಗಿದೆ ಎಂದರು.
ಸಿಡಿಲಿನಿಂದ ಜೀವ ಜನವಾರು ಹಾನಿಯಾಗದಂತೆ ನೋಡಿಕೊಳ್ಳಬೇಕು.

ಸಿಡಿಲು ಆಪ್ ಹಾಗೂ ಸಚೇತ ಆಪ್ ಡೌನಲೋಡ ಮಾಡಿಕೊಳ್ಳಲು ಸಾರ್ವಜನಿಕರಿಗೆ ತಿಳಿವಳಿಕೆ ನೀಡಬೇಕು. ಜೊತೆಗೆ ಸಿಡಿಲಿನಿಂದಾಗುವ ಪರಿಣಾಮಗಳ ಬಗ್ಗೆ ತಿಳಿಸಿಕೊಡಬೇಕು. ಮರದ ಕೆಳಗೆ ನಿಲ್ಲಬಾರದು. ಎಷ್ಟು ಸಾಧ್ಯವೋ ಅಷ್ಟು ಮುಂಗಾರು ಮುಂಜಾಗ್ರತೆ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.
ಪಿಡಿಒಗಳಿಗೆ ಸೂಚನೆ
ಸ್ಥಳೀಯ ಸಮಸ್ಯೆಗಳಿಗೆ ಆಯಾ ಪಿಡಿಒಗಳು ವಿಪತ್ತು ನಿರ್ವಹಣೆ ಸಭೆ ನಡೆಸಬೇಕು. ಏನೇ ಸಮಸ್ಯೆಗಳಿದ್ದರೆ, ಗ್ರಾಮಗಳಲ್ಲಿ ಡಂಗೂರ ಸಾರುವ ಮೂಲಕ ಸ್ಥಳೀಯವಾಗಿ ಮಾಹಿತಿ ನೀಡಬೇಕು. ಈ ಕಾರ್ಯ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಿರ್ವಹಿಸಬೇಕು ಎಂದು ಪಿಡಿಒಗಳಿಗೆ ಸೂಚಿಸಿದರು.
ಆರೋಗ್ಯಾಧಿಕಾರಿಗಳಿಗೆ ಸೂಚನೆ
ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು ಮುಂಜಾಗ್ರತೆ ಕ್ರಮ ವಹಿಸಬೇಕು. ಫಾಗಿಂಗ್ ಮಾಡಿಸಬೇಕು. ಕ್ಲೋರಿನೇಶನ್ ಮಾಡಬೇಕು. ಕುಡಿಯುವ ನೀರಿನ ಬಗ್ಗೆ ಸದಾ ಎಚ್ಚರವಿರಬೇಕು ಎಂದು ಎಚ್ಚರಿಕೆ ನೀಡಿದ ಜಿಲ್ಲಾಧಿಕಾರಿಗಳು, ಕಲುಷಿತ ನೀರು, ಕುಡಿಯುವ ನೀರಿನಲ್ಲಿ ಸೇರದಂತೆ ನೋಡಿಕೊಳ್ಳಬೇಕು. ಗ್ರಾಪಂ ಮಟ್ಟದಲ್ಲಿ ನೀರು ಪರೀಕ್ಷಿಸಿ, ನೀರು ಪೂರೈಸಬೇಕು ಎಂದರು.
ಕುಡಿಯಲು ಯೋಗ್ಯವಲ್ಲದ ನೀರನ್ನು ಪೂರೈಸಬಾರದು. ಕಲುಷಿತ ನೀರು ಪೂರೈಕೆಯಾಗಿ ಏನಾದರೂ ಸಮಸ್ಯೆಯಾದರೆ ಸಂಬಂಧಿಸಿದವರನ್ನು ಹೊಣೆಗಾರರನ್ನಾಗಿಸಲಾಗುವುದು.
ಸಾರ್ವಜನಿಕ ಕುಡಿಯುವ ನೀರು ಗುಣಮಟ್ಟದಿಂದ ಇರಬೇಕು. ದೂರು ಬಂದರೆ ತಕ್ಷಣ ಅಟೆಂಡ್ ಮಾಡಿ, ಸಾರ್ವಜನಿಕರಿಂದ ದೂರು ಬಾರದಂತೆ ಕ್ರಮವಹಿಸಬೇಕು. ಒಟ್ಟಾರೆ ಪ್ರಕೃತಿ ವಿಕೋಪದಲ್ಲಿ ತುಂಬಾ ಜಾಗೃತಿಯಿಂದ ಇರಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.
ಕುಡಿಯುವ ನೀರಿನ ಸ್ವಚ್ಛತೆ ಮತ್ತು ಆರೋಗ್ಯ ರಕ್ಷಣೆ ತೀರಾ ಅಗತ್ಯವಾಗಿದೆ.

ಮಳೆಗಾಲದಲ್ಲಿ ಹರಡುವ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಕುಡಿಯುವ ನೀರಿನ ಮೂಲಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಜೈವಿಕ ಹಾಗೂ ರಾಸಾಯನಿಕ ತಪಾಸಣೆಯನ್ನು ಕಡ್ಡಾಯವಾಗಿ ನಡೆಸಬೇಕು ಎಂದರು.

ಬೀಜ, ಗೊಬ್ಬರ ದಾಸ್ತಾನಿರಲಿ ಮುಂಗಾರು ಬಿತ್ತನೆಗೆ ಅವಶ್ಯಕವಾದ ಬೀಜ ಹಾಗೂ ರಸಗೊಬ್ಬರ ಪಡೆಯಲು ರೈತರಿಗೆ ತೊಂದರೆಯಾಗಬಾರದು. ಕೃಷಿ ಕೇಂದ್ರ ಸೇರಿದಂತೆ ಅಂಗಡಿ ಮುಂಗಟ್ಟುಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ
ಸಾಕಷ್ಟು ಬೀಜ ಹಾಗೂ ರಸಗೊಬ್ಬರ ದಾಸ್ತಾನು ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಗ್ರಾಮ ಪಂಚಾಯತ್ ಮಟ್ಟದಲ್ಲಿ 'ವಿಪತ್ತು ನಿರ್ವಹಣಾ ಸಮಿತಿ'ಗಳನ್ನು ನಡೆಸಬೇಕು.

ಮೂಲಸೌಕರ್ಯ ಹಾಗೂ ಕಟ್ಟಡಗಳ ತಪಾಸಣೆ ಜಿಲ್ಲೆಯಲ್ಲಿರುವ ಶಾಲಾ, ಕಾಲೇಜು ಹಾಗೂ ಅಂಗನವಾಡಿ ಕಟ್ಟಡಗಳ ಸುವ್ಯವಸ್ಥೆಯನ್ನು ಪರಿಶೀಲಿಸಬೇಕು. ಹಳೆಯ ಹಾಗೂ ಶಿಥಿಲಗೊಂಡಿರುವ ಖಾಸಗಿ ಮತ್ತು ಸಾರ್ವಜನಿಕ ಕಟ್ಟಡಗಳನ್ನು ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.
ಮಳೆಗಾಲದ ಅಪಾಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಡಂಗುರ, ಜಿಂಗಲ್ಸ್, ರೇಡಿಯೋ ಹಾಗೂ ಇತರೆ ಜನಪ್ರಿಯ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದರು. ವಿದ್ಯುತ್ ಸುರಕ್ಷತೆ: ವಿದ್ಯುತ್ ಕಂಬ ಹಾಗೂ ಲೈನ್‌ಗಳಿಂದಾಗುವ ಅವಘಡಗಳನ್ನು ತಪ್ಪಿಸಲು ಹೆಸ್ಕಾಂ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವುದು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಯೋಜನಾ ನಿರ್ದೇಶಕ ಬದ್ರುದ್ದಿನ್ ಸೌದಾಗರ್, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವಾನಂದ ಪಾಟೀಲ, ತೋಟಗಾರಿಕಾ ಜಂಟಿ ನಿರ್ದೇಶಕ ರಾಹುಲ್ ಬಾವಿದೊಡ್ಡಿ, ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂಪತ್ ಗುಣಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ ಚವ್ಹಾಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ತೆಲ್ಕರನಗರ ಅಭಿವೃದ್ಧಿಗೆ ಬದ್ದ ಶಾಸಕ ಅಲ್ಲಮಪ್ರಭು ಪಾಟೀಲ



**ಕಲಬುರಗಿ. ಮೇ, 23–** ನಗರದ ಹೊರವಲಯದಲ್ಲಿರುವ ನಂದಿಕುರ ಗ್ರಾಮ ಪಂಚಾಯತಗೆ ಒಳಪಡಲಿರುವ ತೇಲಕರ ನಗರ ಸೇರಿದಂತೆ ನಂದಿಕುರ ತಾಂಡಾ ಅಭಿವೃದ್ಧಿಗೆ ಹೆಚ್ಚಿನ ಹೊತ್ತು ಕೊಡುವುದಾಗಿ ಕಲಬುರ್ಗಿ ದಕ್ಷಿಣ ಮತ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ 20 ಲಕ್ಷ ರೂ. ಆರ್ಥಿಕ ಧನಸಾಯದಿಂದ ತೇಲ್ಕರ್ ನಗರದ ರಸ್ತೆ ಅಭಿವೃದ್ಧಿಯ ಗುದ್ದಲಿ ಪೂಜೆಯನ್ನು ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು ತಮ್ಮ ಶಾಸಕರ ಅನುದಾನದಲ್ಲಿ ಖಣದಾಳ ಪ್ರೌಢಶಾಲೆಯಲ್ಲಿ ಒಂದು ಪದವಿ ಪೂರ್ವ ಕಾಲೇಜನ್ನು ನಿರ್ಮಿಸಿ ಕೇಂದ್ರ ಕಾರಾಗೃಹದ ( ಸೆಂಟ್ರಲ್ ಜೈಲ್ ) ಸಮೀಪ ಒಂದು ಸುಸ್ತಜ್ಜಿತ ಗ್ರಂಥಾಲಯವನ್ನು ನಿರ್ಮಿಸುವುದಾಗಿ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ನಂದಿಕುರ ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷ ಪವನಕುಮಾರ ವಳಕೇರಿ ಅವರು, ಕೇಂದ್ರ ಕಾರಾಗೃಹದ ಪಕ್ಕದಲ್ಲಿಯ ಒಂದು ರುದ್ರ ಭೂಮಿಯನ್ನು ಈಗಾಗಲೇ ನಿರ್ಮಿಸಲಾಗಿದ್ದು ಅದಕ್ಕೆ ಕಾಂಪೌಂಡ್ ವ್ಯವಸ್ಥೆಯನ್ನು ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ಕೂಡಲೇ ನಿರ್ಮಿಸಿ ಕೊಡಬೇಕೆಂದು ಆಗ್ರಹಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಅನಿತಾ ಪವನಕುಮಾರ ವಳಕೇರಿ, ಸನಿಧ್ಯ ವಿಜಯಕುಮಾರ ಶರಣರು ನಂದಿಕೂರ, ಚಂದ್ರಕಾಂತ ಸೀತನೂರ ಮಾಜಿ ಅಧ್ಯಕ್ಷರು ಗ್ರಾ ಪಂ ನಂದಿಕೂರ್,ಶಾಮರಾವ್ ಪಾಟೀಲ, ಶರಣಗೌಡ ಪಾಟೀಲ, ಶಂಕರ ಕಾರಬಾರಿ,ರಮೇಶ ನೈಕೋಡಿ, ವಿಜಯಕುಮಾರ ರಾಠೋಡ, ಸುರೇಶ ಬಡಗೇರ, ಗಣಪತಿ ಬಬಲಾದ, ಶ್ರೀಕಾಂತ್ ಉಳ್ಳಿ, ಶ್ರೀಮಂತ ರಾಠೋಡ,ನಾಗೇಶ ಮುಚಖೆಡ, ಬಸವರಾಜ ಜೇಮಶೆಟ್ಟಿ, ಪವನಕುಮಾರ ಬಿ ವಳಕೇರಿ, ಸಂಗಣ್ಣಗೌಡ ಸೀತನೂರ್, ಮಾಳಪ್ಪ ನೈಕೋಡಿ, ಮಂಜುಶ್ರೀ ಜಾಗಿರದಾರ ಕಾರ್ಯದರ್ಶಿ ಗ್ರಾ ಪಂ ನಂದಿಕೂರ ವಿಠ್ಠಬಾಯಿ ಪಾಟೀಲ ಉಪಸ್ಥಿತರಿದ್ದರು.

## ರೈತರಿಗೆ ಸಮರ್ಪಕ ರಸಗೊಬ್ಬರ ಪೂರೈಸಲು ಆಗ್ರಹ



**ಕಲಬುರಗಿ: ಮೇ.23:**ಮುಂಗಾರು ಹಂಗಾಮಿನ ಬಿತ್ತನೆ ಕಾರ್ಯ ಆರಂಭವಾಗುತ್ತಿರುವ ಹಿನ್ನೆಲೆ ಜಿಲ್ಲೆಯ ರೈತರಿಗೆ ರಸಗೊಬ್ಬರ ಕೊರತೆ ಉಂಟಾಗದಂತೆ ಜಿಲ್ಲಾಡಳಿತ ತಕ್ಷಣ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಚಂದ್ರಕಾಂತ ಪಿ. ಓಗೆ ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು,ಕಳೆದ ನಾಲ್ಕೈದು ವರ್ಷಗಳಿಂದ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ಜಿಲ್ಲೆಯ ರೈತರು ತೀವ್ರ ಸಂಕಷ್ಟ ಅನುಭವಿಸಿದ್ದು,ಬೆಳೆದ ಬೆಳೆ ಕೈಗೆಟುಕದೇ ರೈತರು ಆರ್ಥಿಕವಾಗಿ ಸಂಪೂರ್ಣ ಕುಸಿದಿದ್ದಾರೆ. ಇಂತಹ ಪರಿಸ್ಥಿತಿಯಲ್ಲೂ ರೈತರಿಗೆ ಸಮರ್ಪಕ ರಸಗೊಬ್ಬರ ಪೂರೈಕೆ ಮಾಡದಿದ್ದರೆ ಜಿಲ್ಲಾಡಳಿತದ ವಿರುದ್ಧ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಕಳೆದ ವರ್ಷ ಜಿಲ್ಲೆಯ ಹಲವು ಭಾಗಗಳಲ್ಲಿ ರೈತರು ರಸಗೊಬ್ಬರಕ್ಕಾಗಿ ಅಂಗಡಿಗಳ ಮುಂದೆ ಹಗಲು– ರಾತ್ರಿ ಸಾಲಿನಲ್ಲಿ ನಿಂತು ಪರದಾಡಿದ ಘಟನೆಗಳು ನಡೆದಿದ್ದವು. ಕೆಲ ರಸಗೊಬ್ಬರ ವ್ಯಾಪಾರಸ್ಥರು ಯೂರಿಯಾ ಗೊಬ್ಬರದ ಕೃತಕ ಅಭಾವ ಸೃಷ್ಟಿಸಿ ಕಾಳಬಜಾರ್ ನಡೆಸಿ ರೈತರನ್ನು ಸಂಕಷ್ಟಕ್ಕೆ ದೂಡಿದ್ದರು. ಈ ಬಾರಿ ಅಂತಹ ಘಟನೆಗಳು ಮರು ಕಳಿಸದಂತೆ ಜಿಲ್ಲಾಡಳಿತ ಹಾಗೂ ಕೃಷಿ ಇಲಾಖೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಅವರು ಒತ್ತಾಯಿಸಿದರು.

ಮುಂಗಾರು ಹಂಗಾಮಿಗೆ ಅಗತ್ಯವಿರುವ ಯೂರಿಯಾ, ಡಿಎಪಿ ಸೇರಿದಂತೆ ಎಲ್ಲ ವಿಧದ ರಸಗೊಬ್ಬರಗಳನ್ನು ಜಿಲ್ಲೆಯ ಎಲ್ಲ ಸಹಕಾರ ಸಂಘಗಳು ಹಾಗೂ ಖಾಸಗಿ ಅಂಗಡಿಗಳಲ್ಲಿ ಸಮರ್ಪಕವಾಗಿ ಮತ್ತು ನಿರಂತರವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಒಂದು ಎಐಡಿ ಖಾತೆಯ 1 ಎಕರೆ ಭೂಮಿಗೆ ಒಂದು ತಿಂಗಳಿಗೆ ಒಂದೇ ಯೂರಿಯಾ ಚೀಲ ಎಂಬ ನಿಯಮದಿಂದ ರೈತರಿಗೆ ಅನ್ಯಾಯವಾಗುತ್ತಿದ್ದು, ಈ ನಿಯಮವನ್ನು ಕೂಡಲೇ ರದ್ದುಪಡಿಸಿ ರೈತರ ಅವಶ್ಯಕತೆಗೆ ಅನುಗುಣವಾಗಿ ಗೊಬ್ಬರ ವಿತರಣೆ ಮಾಡುವಂತೆ ಅವರು ಮನವಿ ಮಾಡಿಕೊಂಡರು.

## ಕರಜಗಿ ಬಸ್ ನಿಲ್ದಾಣದ ಮುಂದೆ ಭರ್ಜರಿ ಕುರಿ ಸಂತೆ : ಟ್ರಾಫಿಕ್ ಸಮಸ್ಯೆಗೆ ಸಾರ್ವಜನಿಕರ ಆಕ್ರೋಶ



**ಕರಜಗಿ :ಮೇ.23:**ಅಫಜಲಪುರ ತಾಲೂಕಿನ ಕರಜಗಿ ಗ್ರಾಮದಲ್ಲಿ ಪ್ರತಿ ಶನಿವಾರ ನಡೆಯುವ ಭರ್ಜರಿ ಕುರಿ ಸಂತೆಯಿಂದ ಬಸ್ ನಿಲ್ದಾಣದ ಬಳಿ ಭಾರೀ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ನೂರಾರು ಕುರಿಗಳ ಖರೀದಿ–ಮಾರಾಟ ನಡೆಯುತ್ತಿರುವ ಹಿನ್ನೆಲೆಯಲ್ಲಿ ಬಸ್‌ಗಳು ತಿರುಗಾಡಲು ಹಾಗೂ ನಿಲ್ಲಲು ಸ್ಥಳವಿಲ್ಲದಂತಾಗಿದೆ.

ಗ್ರಾಮ ಪಂಚಾಯಿತಿ ವತಿಯಿಂದ ಪ್ರತಿ ಕುರಿಗೆ 50 ರಂತೆ ರಸೀದಿ ನೀಡಲಾಗುತ್ತಿದ್ದು, ಪ್ರತೀ ವಾರ ದೊಡ್ಡ ಮಟ್ಟದಲ್ಲಿ ವ್ಯಾಪಾರ ನಡೆಯುತ್ತಿದೆ. ಆದರೆ ಸಂತೆಗೆ ಆಗಮಿಸುವ ವಾಹನಗಳಿಗಾಗಿ ಸಮರ್ಪಕ ಪಾಕಿರ್ಂಗ್ ವ್ಯವಸ್ಥೆ ಮಾಡದೇ ಇರುವುದಕ್ಕೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿಶೇಷವಾಗಿ ಸೊನ್ನ ಬ್ಯಾರೇಜ್ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆ ಇಂಡಿ–ಗುಲ್ಬರ್ಗ ಮಾರ್ಗದ ಬಸ್‌ಗಳು ಕರಜಗಿ ಮಾರ್ಗವಾಗಿ ಸಂಚರಿಸುತ್ತಿವೆ. ಇದರಿಂದ ಬಸ್ ನಿಲ್ದಾಣದ ಬಳಿ ಜನಸಂದಣಿ ಮತ್ತು ವಾಹನ ದಟ್ಟಣೆ ಮತ್ತಷ್ಟು ಹೆಚ್ಚಾಗಿದೆ. ಶಾಲಾ ಮಕ್ಕಳು, ಮಹಿಳೆಯರು ಹಾಗೂ ಪ್ರಯಾಣಿಕರು ರಸ್ತೆ ದಾಟಲು ಪರದಾಡುವ ಸ್ಥಿತಿ ನಿರ್ಮಾಣವಾಗಿದ್ದು, ಅಪಘಾತ ಸಂಭವಿಸುವ ಭೀತಿ ಎದುರಾಗಿದೆ. ಕೂಡಲೇ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಿಸಿದ ಅಧಿಕಾರಿಗಳು ಪಾಕಿರ್ಂಗ್ ವ್ಯವಸ್ಥೆ ಕಲ್ಪಿಸಿ, ಟ್ರಾಫಿಕ್ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಕರಜಗಿಯಲ್ಲಿ ಪ್ರತಿ ಶನಿವಾರ ಭರ್ಜರಿ ಕುರಿ ಸಂತೆ
ಪ್ರತಿ ಕುರಿಗೆ 50 ರಸೀದಿ ವಸೂಲಿ ಮಾಡುತ್ತಿರುವ ಗ್ರಾಮ ಪಂಚಾಯಿತಿ
ನೂರಾರು ಕುರಿಗಳ ಖರೀದಿ–ಮಾರಾಟದಿಂದ ಟ್ರಾಫಿಕ್ ಸಮಸ್ಯೆ
*ಬಸ್‌ಗಳಿಗೆ ತಿರುಗಾಡಲು, ನಿಲ್ಲಲು ಜಾಗವಿಲ್ಲ
ಸೊನ್ನ ಬ್ಯಾರೇಜ್ ಕಾಮಗಾರಿಯಿಂದ ಇಂಡಿ–ಗುಲ್ಬರ್ಗ ಬಸ್ ಸಂಚಾರ ಹೆಚ್ಚಳ
ಪಾಕಿರ್ಂಗ್ ವ್ಯವಸ್ಥೆ ಇಲ್ಲದೆ ಸಾರ್ವಜನಿಕರ ಪರದಾಟ
*ಸಂತೆ ಸ್ಥಳಾಂತರಕ್ಕೆ ಗ್ರಾಮಸ್ಥರ ಒತ್ತಾಯ

## ರೌಡಿ ಶೀಟರ್ ಈಶ್ವರ ಮುಡಬಿ ಗಡಿಪಾರು



**ಕಲಬುರಗಿ,ಮೇ.23–** ರೌಡಿಶೀಟರ್ ಈಶ್ವರ ತಂದೆ ಶಿವಶರಣಪ್ಪ ಮುಡಬಿ (27)ಯನ್ನು ಬೀದರ್ ಜಿಲ್ಲೆಯ ಹುಮನಾಬಾದ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಲಾಗಿದೆ.

ಸಂಜೀವನಗರದ ನಿವಾಸಿಯಾದ ರೌಡಿಶೀಟರ್ ಈಶ್ವರ ಮುಡಬಿ ವಿರುದ್ಧ ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ 9 ಪ್ರಕರಗಣಗಳು ದಾಖಲಾಗಿದ್ದು, ಆರೋಪಿಯನ್ನು"ಎ"ರೌಡಿ ಎಂದು ಗುರುತಿಸಲಾಗಿದೆ.

ಈತನ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಗಡಿಪಾರು ಮಾಡುವುದು ಸೂಕ್ತ ಎಂದು ಚೌಕ್ ಪೊಲೀಸ್ ಠಾಣೆಯ ಪಿಐ ಸುಶೀಲಕುಮಾರ ಅವರು ವರದಿ ನೀಡಿದ ಹಿನ್ನೆಲೆಯಲ್ಲಿ ಡಿಸಿಪಿ ಶಾಲೂ ಹಾಗೂ ನ್ಯಾಯಾಲಯದ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಆರೋಪಿಯನ್ನು ಬೀದರ್ ಜಿಲ್ಲೆಯ ಹುಮನಾಬಾದ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಿ ಆದೇಶ ಹೊರಡಿಸಿದ್ದಾರೆ.

# ಪಿಎಂ ಮಿತ್ರ ಜವಳಿ ಪಾರ್ಕ್ ಕಾಮಗಾರಿ ಚುರುಕುಗೊಳಿಸಲು ಸಚಿವರ ಸಭೆಯಲ್ಲಿ ತೀರ್ಮಾನ



**ಬೆಂಗಳೂರು,ಮೇ.23–**ಮುಖ್ಯಮಂತ್ರಿಗಳು ಈ ಬಾರಿಯ ಆಯವ್ಯಯದಲ್ಲಿ ಘೋಷಿಸಿರುವಂತೆ ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ ಮಿತ್ರ ಜವಳಿ ಪಾರ್ಕ್' (PM MITRA Park) ಯೋಜನೆಯ ಕಾಮಗಾರಿಗಳನ್ನು ಅತ್ಯಂತ ವೇಗವಾಗಿ ಮುಗಿಸಲು ನಿರ್ಧರಿಸಲಾಯಿತು.

ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ರಾಜ್ಯದ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶಾಲಿನಿ ರಜನೀಶ್ ಅವರು ಕೈಮಗ್ಗ ಮತ್ತು ಜವಳಿ ಇಲಾಖೆ ಹಾಗೂ ಕೈಗಾರಿಕಾ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ನಡೆಸಿದ ಮಹತ್ವದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಆಯವ್ಯಯದ ಘೋಷಣೆಯನ್ನು ಕಾಲಮಿತಿಯಲ್ಲಿ ಜಾರಿಗೆ ತರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಸಭೆಯಲ್ಲಿ ಕೈಗಾರಿಕ ಹಾಗೂ ವಾಣಿಜ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್, ಜವಳಿ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬು ಘೋಯಲ್ ಚೌಧರಿ, ಜವಳಿ ಇಲಾಖೆಯ ಆಯುಕ್ತ ಕೆ.ಬಿ.ಬಸವರಾಜ್, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ ಹಾಗೂ ಇನ್ನಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.

ಪರಿಷ್ಕೃತ ಯೋಜನಾ ವರದಿ (DPR) ಸಿದ್ಧತೆ: ಕಲಬುರಗಿ ಪಾರ್ಕನ ಬಾಹ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಒಳಗೊಂಡಂತೆ ಸಮಗ್ರ ಯೋಜನಾ ವರದಿಯನ್ನು (DPR) ತಕ್ಷಣವೇ ಪರಿಷ್ಕರಿಸಿ, ಭಾರತ ಸರ್ಕಾರದ ಯೋಜನಾ ಅನುಮೋದನೆ ಸಮಿತಿ (PAC) ಗೆ ಸಲ್ಲಿಸಲು ಕೈಮಗ್ಗ ಮತ್ತು ಜವಳಿ ಇಲಾಖೆಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಭೂಮಿ ಹಂಚಿಕೆ ಮತ್ತು ಆಂತರಿಕ ಕಾಮಗಾರಿ: ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (KIADB) ಮೂಲಕ ಪಾರ್ಕನ ಮೊದಲ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ತಕ್ಷಣವೇ ಆರಂಭಿಸಲು ಸಭೆಯಲ್ಲಿ ಚರ್ಚಿಸಲಾಯಿತು. ಮೊದಲ ಹಂತದ ಯಶಸ್ವಿ ಅನುಷ್ಠಾನದ ನಂತರವಷ್ಟೇ, ಉದ್ಯೋಗ ಸೃಷ್ಟಿ ಮತ್ತು ಹೂಡಿಕೆ ಪ್ರಮಾಣವನ್ನು ಆಧರಿಸಿ ಎರಡನೇ ಹಂತದ ಅಭಿವೃದ್ಧಿಗೆ ಚಾಲನೆ ನೀಡಲು ಸಭೆ ನಿರ್ಧರಿಸಿತು ಎಂದೂ ಸಚಿವರು ವಿವರಗಳನ್ನು ನೀಡಿದ್ದಾರೆ.

ಕೇಂದ್ರ ಸರ್ಕಾರದ 'ಅಭಿವೃದ್ಧಿ ಬಂಡವಾಳ ಬೆಂಬಲ' (DCS) ಯೋಜನೆಯಡಿ ಒಟ್ಟು ಯೋಜನಾ ವೆಚ್ಚದ ಶೇ. 30 ರಷ್ಟು (ಗರಿಷ್ಠ 500 ಕೋಟಿ) ಧನಸಹಾಯ ಲಭ್ಯವಾಗಲಿದ್ದು, ಇದನ್ನು ಎರಡು ಹಂತಗಳಲ್ಲಿ ಬಳಸಿಕೊಳ್ಳಲಾಗುವುದು. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ, ಪಾರ್ಕನ ಗೇಟ್‌ನಿಂದ ಹೊರಗಡೆ ನಡೆಯುವ ಬಾಹ್ಯ ಕಾಮಗಾರಿಗಳನ್ನು ಒಟ್ಟಾರೆ ಅನುದಾನದ ಅರ್ಹತೆಗಾಗಿ ಪರಿಗಣಿಸಬಹುದಾದರೂ, ಕೇಂದ್ರದ ನಿಜವಾದ ಧನಸಹಾಯವನ್ನು ಕೇವಲ ಪಾರ್ಕನ ಒಳಗಿನ ಆಂತರಿಕ ಮೂಲಸೌಕರ್ಯಗಳಾದ ರಸ್ತೆ, ನೀರು, ವಿದ್ಯುತ್, ತ್ಯಾಜ್ಯ ನೀರು ಸಂಸ್ಕರಣಾ ಘಟಕ (ಅಇಖಿಕ) ಮತ್ತು ವಸತಿ ನಿಲಯಗಳಿಗಾಗಿ ಬಳಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಕಲಬುರಗಿ ಜಿಲ್ಲೆಯ ಆರ್ಥಿಕ ಚಿತ್ರಣವನ್ನೇ ಬದಲಿಸಬಲ್ಲ ಮತ್ತು ಸಾವಿರಾರು ಜನರಿಗೆ ಉದ್ಯೋಗ ನೀಡಬಲ್ಲ ಈ ಬೃಹತ್ ಜವಳಿ ಪಾರ್ಕ್ ಯೋಜನೆಯ ಮೊದಲ ಕಂತಿನ ಹಣ ಬಿಡುಗಡೆಗೆ ಅನುವಾಗುವಂತೆ, ರಾಜ್ಯ ಅನುಷ್ಠಾನ ಸಂಸ್ಥೆಯು ಕನಿಷ್ಠ 25 ಕೋಟಿ ಹಣವನ್ನು ಭೌತಿಕ ಮೂಲಸೌಕರ್ಯಗಳಿಗಾಗಿ ವಿನಿಯೋಗಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಲಾಯಿತು ಎಂದೂ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡಿಸಿ ಪ್ರತಿಭಟನೆ

**ಹುಮನಾಬಾದ್: ಮೇ.23:**ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯನ್ನು ಖಂಡಿಸಿ, ಎನ್‌ಟಿಎ ರದ್ದುಪಡಿಸಲು ಹಾಗೂ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಸಮಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಹಾಗೂ ಎಸ್‌ಎಫ್‌ಐ ವತಿಯಿಂದ ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಅಂಜುಂ ತಬಸ್ಸುಮ್ ಅವರಿಗೆ ಮನವಿಪತ್ರ ಸಲ್ಲಿಸಲಾಯಿತು.

ತಾಲೂಕ ಸಂಚಾಲಕರು ರಾಹುಲ್ ಉದ್ದಾ,ಶೇಶಿ ದಾಂಗೆ, ಗೌಸೋದಿನ್, ಅಮನ್ ಖಾನ್, ವಿದ್ಯಾಸಾಗರ್ ಸಾಧುನೂರ್,ಅವಿನಾಶ್ ಗಾಯಕವಾಡ, ವಿನೋದ ಮೆಕ್ಕೇರಿ, ತುಕಾರಾಮ ಮುಸ್ತಾಪುರೆ,ಮೋಹನ್, ಶ್ರೀನಿವಾಸ ಕಟ್ಟೀಮನಿ, ಶಿವಾನಂದ್ ಕಟ್ಟೀಮನಿ,ನೀಲಕಂಠ ಶೇಟ್ಟಿ, ಕಿಶೋರ್, ಶ್ರೀಕಾಂತ್ ಸೇರಿದಂತೆ ಅನೇಕರು ಇದ್ದರು.



## ಬ್ರಿಮ್ಸ್‌ನಲ್ಲಿ ಪಿಜಿ ವೈದ್ಯ ವಿದ್ಯಾರ್ಥಿ ಮೇಲೆ ಹಲ್ಲೆ ಖಂಡನೆ:ಡಾ. ತುಕಾರಾಂ ಭೇಟಿ ಮಾಡಿದ ಸಂಸದ ಸಾಗರ ಖಂಡ್ರೆ



**ಬೀದರ, ಮೇ.23:**ಬೀದರ ಬ್ರಿಮ್ಸ್ ಆಸ್ಪತ್ರೆಯಲ್ಲಿ ಪಿಜಿ ಪ್ರಥಮ ವರ್ಷದ ಅರ್ಥೋಪೆಡಿಕ್ ವಿದ್ಯಾರ್ಥಿ ಡಾ. ತುಕಾರಾಂ ಅವರ ಮೇಲೆ ನಡೆದ ಹಲ್ಲೆ ಪ್ರಕರಣವನ್ನು ಸಂಸದ ಸಾಗರ ಖಂಡ್ರೆ ತೀವ್ರವಾಗಿ ಖಂಡಿಸಿದ್ದಾರೆ.
ಇಂದು ಮಧ್ಯಾಹ್ನ 4.30 ಗಂಟೆಗೆ ಬ್ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಸಂಸದ ಸಾಗರ ಖಂಡ್ರೆ, ಗಾಯಗೊಂಡಿರುವ ಡಾ. ತುಕಾರಾಂ ಅವರ ಆರೋಗ್ಯ ವಿಚಾರಿಸಿದರು. ಈ ವೇಳೆ ಆಸ್ಪತ್ರೆಯ ವೈದ್ಯರು ಹಾಗೂ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಘಟನೆ ಕುರಿತು ಮಾಹಿತಿ ಪಡೆದುಕೊಂಡರು.

ಈ ಪ್ರಕರಣ ಸಂಬಂಧ ಈಗಾಗಲೇ ಏಳು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯ ಬಳಿಕ ಮಾತನಾಡಿದ ಸಂಸದ ಸಾಗರ ಖಂಡ್ರೆ, "ಜೀವ ಉಳಿಸುವ ವೈದ್ಯರ ಮೇಲೆಯೇ ಹಲ್ಲೆ ನಡೆಯುತ್ತಿರುವುದು ಅತ್ಯಂತ ದುಃಖಕರ ಮತ್ತು ಖಂಡನೀಯ ಸಂಗತಿ. ವೈದ್ಯರ ಮೇಲೆ ಇಂತಹ ದಾಳಿಗಳು ಮರುಕಳಿಸಬಾರದು" ಎಂದು ಆತಂಕ ವ್ಯಕ್ತಪಡಿಸಿದರು.

ಪ್ರಕರಣ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಹೇಳಿದರು. ಸೂಕ್ತ ತನಿಖೆ ನಡೆಸಿ ಶೀಘ್ರದಲ್ಲೇ ಚಾರ್ಜ್‌ಶೀಟ್ ಸಲ್ಲಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.
ಬ್ರಿಮ್ಸ್ ಆಸ್ಪತ್ರೆಯಲ್ಲಿ ಭದ್ರತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದ್ದು, ಪೊಲೀಸ್ ಸಿಬ್ಬಂದಿ ಸಂಖ್ಯೆಯನ್ನು ದ್ವಿಗುಣಗೊಳಿಸಲಾಗಿದೆ. ಈ ಹಿಂದೆ ಕರ್ತವ್ಯದಲ್ಲಿದ್ದ ಮೂವರು ಪೊಲೀಸರ ಬದಲಿಗೆ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಜೊತೆಗೆ ಹೊಸ ಭದ್ರತಾ ಏಜೆನ್ಸಿಯ ಮೂಲಕ ಸುಮಾರು 50 ಭದ್ರತಾ ಸಿಬ್ಬಂದಿಯನ್ನು ನೇಮಕ ಮಾಡುವ ಪ್ರಕ್ರಿಯೆ ಆರಂಭಿಸಲಾಗಿದೆ.

ರಾಜ್ಯದ ವಿವಿಧ ಭಾಗಗಳಲ್ಲಿ ವೈದ್ಯರ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆ ವೈದ್ಯರ ರಕ್ಷಣೆಗೆ ವಿಶೇಷ ಕಾನೂನು ಜಾರಿಗೆ ತರಬೇಕೆಂದು ಸಂಸದ ಸಾಗರ ಖಂಡ್ರೆ ಒತ್ತಾಯಿಸಿದರು. "ರಾತ್ರಿ–ಹಗಲು ಸೇವೆ ಸಲ್ಲಿಸುವ ವೈದ್ಯರಿಗೆ ಭದ್ರತೆ ಒದಗಿಸುವುದು ಸರ್ಕಾರದ ಜವಾಬ್ದಾರಿ" ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬ್ರಿಮ್ಸ್ ನಿರ್ದೇಶಕಿ ಶಾಂತಲಾ ಕೌಜಲಗಿ, ವೈದ್ಯಕೀಯ ಅಧೀಕ್ಷಕರು ಸೇರಿದಂತೆ ಇತರರು ಉಪಸ್ಥಿತರಿದ್ದರು

# ದುಡಿಯುವ ಕೈಗಳಿಗೆ ನರೇಗಾ ಬಲ: ಇಓ ರವಿಚಂದ್ರ ರೆಡ್ಡಿ



**ಜೇವರ್ಗಿ,ಮೇ.23–**ದುಡಿಯುವ ಕೈಗಳಿಗೆ ನರೇಗಾ ಬಲ ತಂದುಕೊಡಲಿದ್ದು, ಮನರೇಗಾದಡಿ ಉದ್ಯೋಗ ಚೀಟಿ ಹೊಂದಿದ ಅರ್ಹರ ಫಾಲಾನುಭವಿಗಳು ಯೋಜನೆಯಡಿ ಕೆಲಸ ಮಾಡಿ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿ ರವಿಚಂದ್ರ ರೆಡ್ಡಿ ಹೇಳಿದರು.
ಶುಕ್ರವಾರ ತಾಲೂಕಿನ ಜೇರಟಗಿ ಗ್ರಾಮ ಪಂಚಾಯತಿಗೆ ಭೇಟಿ ಕೊಟ್ಟು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೆತ್ತಿಕೊಂಡ ಸಾಮೂಹಿಕ ಕ್ಯಾನಲ್ ಹೂಳೆತ್ತುವ ಕಾಮಗಾರಿ ವೀಕ್ಷಿಸಿ ಬಳಿಕ ಮಾತನಾಡಿದರು.
ನರೇಗಾ ಯೋಜನೆಯಡಿ ವಯಸ್ಸಿನ ಮಿತಿ ಇರುವುದಿಲ್ಲ.18 ವರ್ಷ ಮೇಲ್ಪಟ್ಟ ಯುವಕರಿಂದ ಇಳಿ ವಯಸ್ಸಿನ ವಯೋವೃದ್ಧರು ಕೆಲಸ ಮಾಡಲು ಯೋಜನೆಯಡಿ ಅವಕಾಶವಿರುತ್ತದೆ.
ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ನರೇಗಾದಡಿ ಕೆಲಸಕ್ಕೆ ಬರಬೇಕು, ಗಂಡು ಮತ್ತು ಹೆಣ್ಣು 370 ರೂ. ಸಮಾನ ಕೂಲಿ ಪಡೆದುಕೊಳ್ಳಲು ಅವಕಾಶವಿದ್ದು, ಸುಮ್ಮನೆ ಮನೆಯಲ್ಲಿಯೇ ಕುಳಿತು ಕಾಲ ಹರಣ ಮಾಡದೆ ನರೇಗಾದಡಿ ಕೆಲಸ ಮಾಡಿ ಎಂದು ಕಾರ್ಮಿಕರಿಗೆ ಕರೆ ನೀಡಿದರು.
ಯೋಜನೆ ನಿಯಮದಂತೆ ಪಾರದರ್ಶಕವಾಗಿ ಕೆಲಸ ಮಾಡಬೇಕು. ಎಎಂಎಂಎಸ್ ತಂತ್ರಾಂಶದಲ್ಲಿ ಫೇಸ್ ಅತ್ತೆಂಟಿಕೇಶನ್ ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ತೆಗೆದುಕೊಳ್ಳಬೇಕೆಂದು ತಿಳಿಸಿದರು.
ಇದೆ ವೇಳೆ ಕಾರ್ಮಿಕರ ಹಾಜರಾತಿ ಹಾಗೂ ಪ್ರಥಮ ಚಿಕಿತ್ಸೆ ಪೆಟ್ಟಿಗೆ ಪರಿಶೀಲಿಸಿ ಕೆಲಸ ಮಾಡುವ ವೇಳೆ ತಲೆ ಸುತ್ತು ಇಲ್ಲವೇ ಸಣ್ಣ ಪುಟ್ಟ ಗಾಯಗಳು ಆದಂತೆ ಸಂದರ್ಭದಲ್ಲಿ ಮೊದಲಿಗೆ ಪ್ರಾಥಮಿಕ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಕಾರ್ಮಿಕರಿಗೆ ಮಾತನಾಡಿಸಿ ಅವರ ಸಮಸ್ಯೆ ಆಲಿಸಿ ಸೂಕ್ತ ಸಲಹೆ ನೀಡಿದರು.
ನಂತರ ನರೇಗಾ ತಾಲೂಕು ಐಇಸಿ ಸಂಯೋಜಕರಾದ ಚಿದಂಬರ ಪಾಟೀಲ ಮಾತನಾಡಿ, ಬೇಸಿಗೆ ತಾಪಮಾನ ಹೆಚ್ಚಿರುವದರಿಂದ ಕಾರ್ಮಿಕರು ಕೆಲಸ ಮಾಡುವ ಸ್ಥಳದಲ್ಲಿ ಶುದ್ಧ ಕುಡಿಯುವ ನೀರು, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಹಾಗೂ ನೆರಳಿನ ವ್ಯವಸ್ಥೆ ಕಲ್ಪಿಸುವಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹೇಳಿದರು.
ಸಾಮಾಜಿಕ ಭದ್ರತೆ ಕಲ್ಪಿಸಲು ಯೋಜನೆಯಡಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಶೇಕಡಾ 50% ಕೆಲಸದ ಪ್ರಮಾಣದಲ್ಲಿ ರಿಯಾಯಿತಿಯಿದ್ದು, ಕಾರ್ಮಿಕರು ಸದುಪಯೋಗ ಪಡೆದುಕುಕೊಂಡು ಉತ್ತಮವಾಗಿ ಕೆಲಸ ನಿರ್ವಹಹಣೆ ಮಾಡಬೇಕು ಎಂದರು.
ಇದಕ್ಕೂ ಮೊದಲು ಹರವಾಳ ಗ್ರಾಮ ಪಂಚಾಯತ ದೂರಿನ ಹಿನ್ನಲೆ ಕಾರ್ಯನಿರ್ವಾಹಕ ಅಧಿಕಾರಿಗಳು ಬೋರ್ವೆಲ್ ಇರುವ ಭೌತಿಕ ಸ್ಥಳ ವೀಕ್ಷಿಸಿ ನಂತರ ಗ್ರಾಮ ಪಂಚಾಯತಿಗೆ ಭೇಟಿಕೊಟ್ಟು ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕೇಂದ್ರ ಸ್ಥಾನದಲ್ಲಿದ್ದು, ಅಗತ್ಯ ಕ್ರಮ ವಹಿಸಬೇಕೆಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.
ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ರಾಜಕುಮಾರ ಮೂಲಿಮನಿ, ಸಾಭಿರುದ್ದಿನ್, ಗಿರೀಗೌಡ, ಡಿಇಓ ಶಿವಮೂರ್ತಿ, ವಸೂಲಿ ಗಾರ ಸಿದ್ದಣ್ಣ , ಪಂಪ್ ಆಪರೇಟರ್, ಗ್ರಾಮ ಕಾಯಕ ಮಿತ್ರ ಭಾಗ್ಯಶ್ರೀ, ಸೇರಿದಂತೆ ಗ್ರಾಮ ಪಂಚಾಯತ ಎಲ್ಲ ಸಿಬ್ಬಂದಿಗಳು ಮತ್ತು ಕೂಲಿ ಕಾರ್ಮಿಕರು ಹಾಜರಿದ್ದರು.

# ಪರಿಸರ ಸಮತೋಲನೆಗೆ ಜೀವ ವೈವಿಧ್ಯತೆಯ ರಕ್ಷಣೆ ಅಗತ್ಯ



**ಕಲಬುರಗಿ: ಮೇ.23:**ಪರಿಸರದ ಮೇಲಿನ ಮಾನವನ ದಬ್ಬಾಳಿಕೆಯಿಂದ ಅನೇಕ ಗಿಡ–ಮರಗಳು, ಸಸ್ಯ ಸಂಪತ್ತು, ಪ್ರಾಣಿ–ಪಕ್ಷಿಗಳು ನಾಶವಾಗುವ ಮೂಲಕ ಪರಿಸರದ ಅಸಮತೋಲನವಾಗುತ್ತಿದೆ. ಜೀವ ವೈವಿಧ್ಯತೆ ಮತ್ತು ಆಹಾರ ಸರಪಳಿ ಪರಸ್ಪರ ಪೂರಕ ಸಂಬಂಧಿಗಳಾಗಿದ್ದು, ಜೀವ ವೈವಿಧ್ಯತೆ ರಕ್ಷಣೆ ಮಾಡುವುದು ಅಗತ್ಯವಾಗಿದ್ದು, ಇದರಿಂದ ಪರಿಸರ ಸಮಲೋಲನೆ ಸಾಧ್ಯವಿದೆ ಎಂದು ಉಪನ್ಯಾಸಕ, ಪರಿಸರ ಪ್ರೇಮಿ ಎಚ್.ಬಿ.ಪಾಟೀಲ ಹೇಳಿದರು.
ನಗರದ ಜೆ.ಆರ್.ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಅಂತಾರಾಷ್ಟ್ರೀಯ ಜೀವವೈವಿಧ್ಯತೆ ದಿನಾಚರಣೆ'ಯ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.
ಜೀವವೈವಿಧ್ಯ ಸಮೃಧವಾಗಿರುವ ಸ್ಥಳಗಳನ್ನು ಸಂರಕ್ಷಿಬೇಕು. ಮಾನವ–ಪ್ರಾಣಿ ಸಂಘರ್ಷ ತಪ್ಪಿಸುವ ಕಾರ್ಯ ಜರುಗಬೇಕು. ಪ್ಲಾಸ್ಟಿಕ್, ರಸಗೊಬ್ಬರ, ಹಾನಿಕಾರಕ ರಾಸಾಯನಿಕಗಳ ಬಳಕೆ ತಗ್ಗಿಸುವುದು, ವಿವಿಧ ಮಾಲಿನ್ಯಗಳನ್ನು ತಡೆಗಟ್ಟುವುದು, ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡುವುದು, ಸಾವಯುವ ಬೇಸಾಯ ಹೆಚ್ಚಳಗೊಳಿಸುವುದು, ಗಿಡ–ಮರಗಳು, ಪ್ರಾಣಿ–ಪಕ್ಷಿಗಳನ್ನು ಸಂರಕ್ಷಿಸುವುದು ಸೇರಿದಂತೆ ಮುಂತಾದ ಕ್ರಮಗಳನ್ನು ಕೈಗೊಳ್ಳುವ ಮೂಲಕ ಜೀವವೈವಿಧ್ಯತೆಯನ್ನು ಕಾಪಾಡಬಹುದಾಗಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ಜಗತ್ತಿನ ಸಕಲ ಜೀವರಾಶಿಗಳಿಗೆ ಪರಿಸರವೇ ಆವಾಸ ಸ್ಥಾನವಾಗಿದೆ. ಪರಿಸರ ವ್ಯವಸ್ಥೆಯಲ್ಲಿ ಪರಸ್ಪರ ಜೀವಿಗಳು ಪೂರಕವಾಗಿ ಸಂಬಂಧ ಹೊಂದಿರುತ್ತವೆ. ಪರಿಸರ ಸಮತೋಲನದಲ್ಲಿರಲು ಜೀವರಾಶಿಗಳು ಸಮತೋಲನವಾಗಿರಬೇಕು. ಪರಿಸರ ಸಂರಕ್ಷಣೆ ಎಲ್ಲರ ಹೊಣೆ ಎಂದರು.
ಕಾರ್ಯಕ್ರಮದಲ್ಲಿ ಕರಾವಿಪ ಗ್ರಾಮೀಣ ಘಟಕದ ಮಾಜಿ ಸಂಚಾಲಕ ಶಿವಯೋಗೆಪ್ಪಾ ಎಸ್.ಬಿರಾದಾರ, ಶಿಕ್ಷಕಿಯರು, ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು.

# ಪ್ರಜ್ಞಾಯೋಗದಿಂದ ಅಂತಃ ಶಕ್ತಿವೃದ್ಧಿ



**ಕೆಂಭಾವಿ:ಮೇ.23:**ಪ್ರತಿಯೊಬ್ಬರಲ್ಲೂ ಸುಪ್ತವಾಗಿರುವ ಜ್ಞಾನ ಮತ್ತು ಅಂತಃಪ್ರಜ್ಞೆಯನ್ನು ಜಾಗೃತಗೊಳಿಸುವ ಪ್ರಕ್ರಿಯೆಯೆ ಪ್ರಜ್ಞಾಯೋಗವಾಗಿದೆ ಎಂದು ಆರ್ಟ್ ಆಫ್ ಲಿವಿಂಗ್‌ನ ಜಿಲ್ಲಾ ಸಂಯೋಜಕ ಎಸ್.ಎಚ್.ರೆಡ್ಡಿ ಹೇಳಿದರು.
ಪಟ್ಟಣದ ಶ್ರೀ ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ 5 ರಿಂದ 18 ವರ್ಷದ ಒಳಗಿನ ಮಕ್ಕಳಿಗಾಗಿ ನಾಲ್ಕು ದಿನಗಳ ಕಾಲ ಹಮ್ಮಿಕೊಂಡಿದ್ದ ಪ್ರಜ್ಞಾಯೋಗದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು. ಪ್ರಜ್ಞಾಯೋಗದಿಂದ ಸರಿಯಾದ ನಿರ್ಧಾರ : ಸರಿಯಾದ ಸಮಯದಲ್ಲಿ ಸರಿಯಾದ ಆಲೋಚನೆ ಬರುವಂತೆ ಮಾಡುತ್ತದೆ, ಏಕಾಗ್ರತೆ ಮತ್ತು ಗ್ರಹಿಎಕ : ಕಣ್ಣು ಮುಚ್ಚಿಯೇ ಬಣ್ಣಗಳನ್ನು ಗುರುತಿಸುವದು, ಓದುವದು ಮತ್ತು ಚಿತ್ರಗಳನ್ನು ಗ್ರಹಿಸುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ, ಆತ್ಮ ವಿಶ್ವಾಸ ವೃದ್ಧಿ : ಶೈಕ್ಷಣಿಕ ಸಾಧನೆ, ನಿರ್ಧಾರ ತೆಗೆದುಕೊಳ್ಳುವಿಕೆ ಮತ್ತು ಮಕ್ಕಳಲ್ಲಿನ ಸೃಜನಶೀಲತೆಯನ್ನು ಸುಧಾರಿಸುತ್ತದೆ, ದೈಹಿಕ ಮತ್ತು ಮಾನಸಿಕ ಬೆಳವಣಿಗೆ : ಸರಳ ಧ್ಯಾನ ಮತ್ತು ವ್ಯಾಯಾಮಗಳ ಮೂಲಕ ಭಾವನಾತ್ಮಕ ಕೌಶಲ್ಯಗಳನ್ನು ಬೆಳೆಸುತ್ತದೆ ಎಂದು ತಿಳಿಸಿದರು.
ಶ್ರೀ ಹೇಮರೆಡ್ಡಿ ಮಲ್ಲಮ್ಮ ಶಿಕ್ಷಣ ಸಂಸ್ಥೆಯ ಸಂಯೋಜಕ ಮೋಹನರೆಡ್ಡಿ ಡಿಗ್ಗಾವಿ ಮಾತನಾಡಿ, ಪ್ರತಿಯೊಬ್ಬ ಮಾನವನಲ್ಲೂ ಅಂತರಂಗ ಶಕ್ತಿ ಅಡಗಿದ್ದು, ಅದನ್ನು ಜಾಗೃತಗೊಳಿಸುವ ಉದ್ದೇಶದಿಂದ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ವಿಶೇಷ ತರಬೇತಿ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದೆ. ಇಂದಿನ ಮಕ್ಕಳು ಮೊಬೈಲ್ ಹಾಗೂ ಟಿವಿಗಳ ಗೀಳಿಗೆ ಒಳಗಾಗುತ್ತಿರುವ ಹಿನ್ನೆಲೆಯಲ್ಲಿ ಅವರನ್ನು ಇಂತಹ ಶಿಬಿರಗಳತ್ತ ಆಕರ್ಷಿಸುವುದು ಅಗತ್ಯವಾಗಿದೆ. ಈ ಒಂದು ಶಿಬಿರದಲ್ಲಿ ಸುಮಾರು 24 ಮಕ್ಕಳು ಭಾಗವಹಿಸಿ ಉತ್ತಮವಾಗಿ ಕಲಿತಿದ್ದಾರೆ ಎಂದರು.
ಶಿಕ್ಷಕಿ ಸರಿತಾ ನಾಲ್ಕು ದಿನಗಳ ಕಾಲ ಮಕ್ಕಳಿಗೆ ಯೋಗ ಹಾಗೂ ಧ್ಯಾನ ತರಬೇತಿಯನ್ನು ನೀಡಿದರು. ಈ ಸಂದರ್ಭದಲ್ಲಿ ಆರ್ಟ್ ಆಫ್ ಲಿವಿಂಗ್‌ನ ಜಿಲ್ಲಾ ಶಿಕ್ಷಕಿ ಶಿಲ್ಪಾ ಅವಂಟಿ, ಆನಂದ ಬಾರಿಗಿಡದ, ರಾಘವೇಂದ್ರ, ಸಿ.ಶ್ರೀನಿವಾಸ, ವೆಂಗಮಾಂಬ ಶ್ರೀನಿವಾಸ, ಮಲ್ಲು ದೇಸಾಯಿ, ರೇವಣಸಿದ್ದಯ್ಯ ಮಠ, ನವೀನ, ಆಂಜನೇಯಲು, ಸತೀಶ, ಡಾ.ಶಿವಾನಂದ ಆಲಗೂರ, ವಿಕಾಸ ಸೊನ್ನದ, ಹಣಮಂತ ಬಡಿಗೇರ, ಉಮೇಶರೆಡ್ಡಿ ಯಲ್ಹೇರಿ, ಬಸಯ್ಯಸ್ವಾಮಿ, ಶಿವಕುಮಾರ ಬಂದೆ, ಬಾಹುಬಲಿ, ಸೌಜನ್ಯ ಹರವಾಳ, ಸಂಗೀತಾ ಮುರಾಳ ಸೇರಿದಂತೆ ಇತರರಿದ್ದರು. ಡಿ.ಸಿ.ಪಾಟೀಲ ನಿರೂಪಿಸಿ, ವಂದಿಸಿದರು.

# ಜಾನಪದ ಸಾಹಿತ್ಯ ಕಲೆ ದೇಶದ ನಿಜವಾದ ಸಂಸ್ಕೃತಿ: ಶಾಸಕ ಪ್ರಭು ಚೌಹ್ವಾಣ



**ಬೀದರ:ಮೇ.23:**ಔರಾದ ತಾಲೂಕಿನ ಚಿಕ್ಲಿ (ಜೆ) ಗ್ರಾಮದ ಪಾಂಡುರಂಗ ದೇವಸ್ಥಾನದಲ್ಲಿ ರಮಾಬಾಯಿ ಮಹಿಳಾ ಕೆಲೆ ಮತ್ತು ಸಾಂಸ್ಕೃತಿಕ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ 2025–2026 ನೇ ಸಾಲಿನ ವಿಶೇಷ ಘಟಕ ಯೋಜನೆಯಡಿಯಲ್ಲಿ ಜಾನಪದ ಸಂಭ್ರಮ ಸಂಗೀತ ಕಾರ್ಯಕ್ರಮವನ್ನು ಮಾಜಿ ಮಂತ್ರಿಗಳು ಔರಾದ (ಬಿ) ಮೀಸಲು ಕ್ಷೇತ್ರದ ಶಾಸಕರಾದ ಪ್ರಭು ಚೌಹ್ವಾಣ ಉದ್ಘಾಟನೆ ಮಾಡಿ, ಜಾನಪದ ಭಾಷೆ ತಾಯಿ ಮಗುವಿಗೆ ಕಲಿಸುವ ಮೊದಲ ನುಡಿಯಾಗಿದೆ. ಜಾನಪದ ಸಾಹಿತ್ಯ ಸಂಸ್ಕೃತಿ ನಮ್ಮ ದೇಶದ ಸಂಪತ್ತಾಗಿದೆ. ರೈತ ಭೂಮಿಯಲ್ಲಿ ಜೋಡೆತ್ತುಗಳೊಂದಿಗೆ ಉತ್ತುವಗ, ಬಿತ್ತುವಾಗ ರಾಷಿ ಮಾಡುವಾಗ ರಾಷಿ ತನ್ನ ಮನೆಗೆ ಬಂಡಿಯಲ್ಲಿ ತರುವಾಗ ತನ್ನ ಹಾಡಿನ ಮೂಲಕ ಜಾನಪದ ಸಾಹಿತ್ಯವನ್ನು ಹಾಡಿನ ಮೂಲಕ ಹೇಳುತ್ತಾನೆ.

ಸಭೆ ಸಮಾರಂಭಗಳು ಜಾತ್ರೆ ಮಹೋತ್ಸವಗಳು ಜರುವಾಗ, ಕೋಲಾಟ ಭಜನೆ ತಮಟೆವಾದ ಡೊಳ್ಳು ಕುಣಿತದ ಮೂಲಕ ತನ್ನ ಕೆಲಸಯನ್ನು ಪ್ರದರ್ಶನ ಮಾಡಿ ಹಳ್ಳಿಗಳ ಸಿರಿತನದ ಸೊಗಸು ಹಂಚುತ್ತಾರೆ. ಮಹಿಳೆಯರು ತಮಟೆವಾದನ ಭಾರಿಸುವ ಮೂಲಕ ಪುರುಷ್ಯರಗಿಂತ ನಾವೇನು ಕಮ್ಮಿ ಇಲ್ಲವೆಂದು ತೋರಿಸಿಕೊಟ್ಟಿದ್ದಾರೆ. ಆರೋಗ್ಯವಂತ ಜೀವನಕ್ಕೆ. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಂಗೀತ ಅವಶ್ಯಕವಾಗಿದೆ. ಅಧ್ಯಕ್ಷತೆಯನ್ನು ರಮಾಬಾಯಿ ಮಹಿಳಾ ಕಲೆ ಮತ್ತು ಸಾಂಸ್ಕೃತಿಕ ಸಂಘ ಚಿಕ್ಲಿ (ಜೆ) ಅಧ್ಯಕ್ಷರಾದ ಶ್ರೀಮತಿ ಕಮಳಮ್ಮಾ ವಹಿಸಿದರು, ಮುಖ್ಯ ಅತಿಥಿಗಳಾಗಿ ಸುಭಾಷ ಪಾಟೀಲ್ ಪವನ ಪಾಟೀಲ್ ಚಂದ್ರಶೇಖರ ನಿರ್ಣಾ ರಾಜು ಪಾಟೀಲ್ ಕಿರಣ ಪಾಟೀಲ್ ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀಮತಿ ಈರಮ್ಮಾ ಸಂಜುರಡ್ಡಿ ಎಸ್ ಡಿ ಎಂ ಸಿ ಅಧ್ಯಕ್ಷ ಶ್ರೀ ದೀಪಕ ವೈಜಿನಾಥ ಭಾಗವಹಿಸಿದ ಕಾರ್ಯಕ್ರಮದಲ್ಲಿ ಜಾನಪದ ಗೀತೆಃ ಶ್ರೀಮತಿ ಪಾರ್ವತಿ ಮತ್ತು ತಂಡದವರು, ತಮಟೆವಾದನಃ ಅರ್ಜಿನ ತಂಡದವರು ಕನ್ನಡ ಹಾಡುಗಳುಃ ದೇವಾದಾಸ ಚಿಮಕೊಡ ವೇಷಾಭೂಷಣಕಲೆಃ ಭಜನೆಃ ಕಲಾವಿತ ಲಾಧ ಮೋರಂ ಪದ್ಯಃ ನಿಲ್ಲಮ್ಮಾ ತಂಡದವರು ಹಂತಿ ಪದ್ಯಃ ಸರಸ್ಪತಿ ತಂಡದವರು ಬುಲಾಯಿ ಹಾಡುಃ ಸೋನಮ್ಮಾ ನಾಡುಗೀತೆಃ ಪ್ರಿಯಾಂಕ ಹಾಡಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE